ಸಂಪುಟ : 9 ಸಂಚಿಕೆ 197 ಪುಟ : 4 ಬೆಲೆ: 3.00 ಶುಕ್ರವಾರ ಸೆಪ್ಟೆಂಬರ್ 13 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 197 Pages : 4 Price : 3.00 Friday september 13 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದಲ್ಲಿ ಸಾರ್ವಜನಿಕರಿಗೆ ಸೆಪ್ಟೆಂಬರ್ -13 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 21, 22 ಟವರ್ ಕಂಬ, ವಾಲ್ಮೀಕಿ ಭವನ, ಕಮತರ ಪ್ಲಾಟ್, ಕರುಗಲ್ ಲೇಔಟ್, ವಿಜಯನಗರ ಶಾಲೆ ಕೆಲವು ಭಾಗಗಳು. ವಾರ್ಡ್ ನಂ. 6 ನಾವಳ್ಳಿಯವರ ಲೈನ್, ರೆಡ್ಡಿಯವರ ಲೈನ್, ಅಂಬೇಡ್ಕರ್ ನಗರ, ಭಜಂತ್ರಿ ಓಣಿ, ಹುಲಿಯವರ ಲೈನ್, ಹಾದಿಮನಿಯವರ ಲೈನ್, ರೊಟ್ಟಿಯವರ ಲೈನ್, ಸಿದ್ದಲಿಂಗ ನಗರ, ಜಮಲಮ್ಮನ ಗುಡಿ ಲೈನ್.

ವಾರ್ಡ್ ನಂ. 21, 22, 23 ಕಗನಳ್ಳಿ, ಆರೋಗೇರಿ, ಹೆಬಸೂರ, ಹೊನ್ನೆತಮ್ಮ ಭಾಗ-1,2, ಸೋಮನಗೌಡ್ರ, ಕಮತರ ಲೈನ್, ವಿಭೂತಿ ಓಣಿ ಭಾಗ-1,2, ದ್ಯಾಮಪ್ಪನ ಕಟ್ಟಿ, ಪಡಗದ ಭಾಗ-1,2, ಗಂಜಿ ಬಸವೇಶ್ವರ ಸರ್ಕಲ್, ಕುಂಬಾರ, ಬನ್ನಿ ಕಾಳಮ್ಮನ ಗುಡಿ.

ವಾರ್ಡ್ ನಂ. 27, 28 ಸಂಕಣ್ಣವರ ಲೇಔಟ್, ಕೇಶವ ನಗರ, ಚರ್ಚ ಲೈನ್, ಪಂಚಾಕ್ಷರಿ ನಗರ, 3ನೇ ಕ್ರಾಸ್. ವಾರ್ಡ್ ನಂ. 1 ಎಸ ಎಂ ಕೃಷ್ಣ ನಗರ ಪೂರ್ತಿ ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೆ.17ರಂದು ವಿಶ್ವ ಕರ್ಮ ಜಯಂತಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ , ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಸೆಪ್ಟೆಂಬರ್ 17 ರಂದು ಬೆ 11 ಗಂಟೆಗೆ ನಗರದ ಗಂಗಿಮಡಿ ಕ್ರಾಸ್ ವಿಜಯನಗರ ಬಡಾವಣೆಯ ಶ್ರೀ ವಿಶ್ವಕರ್ಮ ಸಮುದಾಯ ಭವನದಲ್ಲಿ ಶ್ರೀ ವಿಶ್ವಕರ್ಮ ಜಯಂತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರಾದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕರಾದ ಡಾ.ಚಂದ್ರು ಲಮಾಣಿ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಜಿ ಆಗಮಿಸುವರು.

ಕಲಬುರ್ಗಿ ಜಿಲ್ಲೆಯ ಯಡ್ರಾಮಿ ತಾಲೂಕಿನ ವಸ್ತಾರಿ-ಸಿರಸಗಿ ಶ್ರೀ ಗುರು ಭೀವಾ ಶಂಕರ ವಿದ್ಯಾಪೀಠದ ಅಧ್ಯಕ್ಷರಾದ ಬಸವರಾಜ ಬಡಿಗೇರ ಬೋರಗಿ ಅವರು ಶ್ರೀ ವಿಶ್ವ ಕರ್ಮರ ಜೀವನ ಮತ್ತು ಸಂದೇಶ ಕುರಿತು ಉಪನ್ಯಾಸ ನೀಡಲಿದ್ದಾರೆ.

ಕು. ಪ್ರಸಾದ ಗುರುನಾಥ ಸುತಾರ ಮತ್ತು ತಂಡದವರು ಸುಗಮ ಸಂಗೀತ ಪ್ರಸ್ತುತ ಪಡಿಸಲಿದ್ದಾರೆ.

ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಹಾಗೂ ಕಾನೂನು ಮಾಪನ ಶಾಸ್ತ್ರ ಇಲಾಖೆಯ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ಸ್ವಾಗತ ಕೋರಿದ್ದಾರೆ.

### ಇಂದಿರಾ ಕ್ಯಾಂಟೀನ್ ಹೊಸ ದರಪಟ್ಟಿ, ಆಹಾರಗಳ ಪೂರೈಕೆಗೆ ಸಚಿವ ಸಂತೋಷ ಲಾಡ್ ಚಾಲನೆ

# ಇಂದಿರಾ ಕ್ಯಾಂಟೀನ್ ರಾಷ್ಟ್ರಕ್ಕೆ ಮಾದರಿ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಕರ್ನಾಟಕ ಸರಕಾರವು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಾಯಕತ್ವದಲ್ಲಿ ಬಡವರಿಗೆ, ಕಾರ್ಮಿಕರಿಗೆ, ಹಿಂದುಳಿದವರಿಗೆ ಹಾಗೂ ಎಲ್ಲ ಸಾರ್ವಜನಿಕರಿಗೆ ಇಂದಿರಾ ಕ್ಯಾಂಟೀನ್ ಮೂಲಕ ಕೇವಲ ಐದು ರೂಪಾಯಿಗೆ ಊಟ-ಉಪಹಾರ ನೀಡುತ್ತಿರುವುದು ರಾಷ್ಟ್ರಕ್ಕೇ ಮಾದರಿಯಾಗಿದೆ ಎಂದು ಕಾರ್ಮಿಕ ಇಲಾಖೆ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹೇಳಿದರು.

ಅವರು ಗುರುವಾರ ಬೆಳಿಗ್ಗೆ ನಗರದ ಮಿನಿ ವಿಧಾನಸೌಧದ ಬಳಿ ಇರುವ ಇಂದಿರಾ ಕ್ಯಾಂಟೀನ್‌ನಲ್ಲಿ ಇಂದಿರಾ ಕ್ಯಾಂಟೀನ್ ಹೊಸ ದರ ಪಟ್ಟಿ ಮತ್ತು ವಿವಿಧ ಆಹಾರಗಳ ಪೂರೈಕೆಗೆ ಚಾಲನೆ ನೀಡಿ ಮಾತನಾಡಿದರು.

ಇಂದಿರಾ ಕ್ಯಾಂಟೀನ್ ಅನ್ನುವುದು, ರಾಜ್ಯ ಸರಕಾರದ ಮಹತ್ವದ ಕೊಡುಗೆಯಾಗಿದೆ. ಜಿಲ್ಲೆಯ ಅವಳಿ ನಗರದಲ್ಲಿ 9 ಇಂದಿರಾ ಕ್ಯಾಂಟೀನ್‌ಗಳು ಕಾರ್ಯ ನಿರ್ವಹಿಸುತ್ತಿವೆ. ಪ್ರತಿ ಇಂದಿರಾ ಕ್ಯಾಂಟೀನ್‌ನಿಂದ ಪ್ರತಿದಿನ 500 ಜನರಿಗೆ ಊಟ ಪೂರೈಸುವ ಗುತ್ತಿಗೆ



ನೀಡಲಾಗಿದೆ. ಅದರಂತೆ ಇಂದಿರಾ ಕ್ಯಾಂಟೀನ್‌ಗಳು ಕಾರ್ಯ ನಿರ್ವಹಿಸುತ್ತಿವೆ ಎಂದು ಹೇಳಿದರು.

ಇಂದಿರಾ ಕ್ಯಾಂಟೀನ್‌ನ ಪ್ಯಾಕೇಜ್ 1ರಲ್ಲಿ ಹುಬ್ಬಳ್ಳಿಯ ಕಿಮ್ಸ್ ಆವರಣ, ಹೊಸ ಬಸ್ ನಿಲ್ದಾಣ, ಎಸ್.ಎಮ್. ಕೃಷ್ಣ ನಗರ, ನ್ಯೂ ಇಂಗ್ಲೀಷ್ ಶಾಲೆ, ಸೋನಿಯಾ ಗಾಂಧಿ ನಗರದಲ್ಲಿ ಪ್ರತಿದಿನ ಬೆಳಗಿನ ಉಪಹಾರ 500, ಮಧ್ಯಾಹ್ನದ ಊಟ 500, ರಾತ್ರಿ ಊಟ 500 ಸೇರಿ ಒಟ್ಟು 1500 ಜನರಿಗೆ ಊಟ, ಉಪಹಾರ ಪೂರೈಸಲಾಗುತ್ತಿದೆ.

ಪ್ಯಾಕೇಜ್ 2ರಲ್ಲಿ ಧಾರವಾಡದ ಹೊಸ ಬಸ್ ನಿಲ್ದಾಣ, ಮಿನಿ ವಿಧಾನಸೌಧ, ಹುಬ್ಬಳ್ಳಿಯ ಉಣಕಲ್, ಬೆಂಗೇರಿ ಸಂತೆ ಮೈದಾನದ ಕ್ಯಾಂಟೀನ್‌ಗಳಿಗೆ ಪ್ರತಿದಿನ ಬೆಳಗಿನ ಉಪಹಾರ, ಮಧ್ಯಾಹ್ನದ ಊಟ, ರಾತ್ರಿ ಊಟ ನೀಡಲಾಗುತ್ತಿದೆ.

### ಊಟದ ರುಚಿ ಸವಿದ ಸಚಿವ, ಡಿಸಿ

ಸಚಿವ ಸಂತೋಷ ಲಾಡ್ ಧಾರವಾಡ ನಗರದಲ್ಲಿ ಇಂದಿರಾ ಕ್ಯಾಂಟೀನ್‌ನಲ್ಲಿ ಹೊಸ ದರದ ಪಟ್ಟಿ ಬಿಡುಗಡೆ ಮಾಡಿ, ವಿವಿಧ ಪ್ರಕಾರದ ಉಪಹಾರ ಸೇವಿಸಿದರು. ಕ್ಯಾಂಟೀನ್‌ನಲ್ಲಿ ಸಚಿವ ಸಂತೋಷ ಲಾಡ್ ಹಾಗೂ ಡಿಸಿ ದಿವ್ಯ ಪ್ರಭು ಅವರು ಐದು ರೂ ಹಣ ಕೊಟ್ಟು ಟೋಕನ್ ಖರೀದಿಸಿದರು. ನಂತರ ಸಚಿವರು ಜೋಳದ ರೊಟ್ಟಿ ಊಟ, ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಇಡ್ಲಿ, ಅವಲಕ್ಕಿ ಮತ್ತು ಶ್ಯಾವಿಗೆ ಸಿಹಿ ಸವಿದರು.

ಈ ಸಂದರ್ಭದಲ್ಲಿ ನವಲಗುಂದ ಶಾಸಕ ಎನ್. ಎಚ್. ಕೋನರಡ್ಡಿ, ಜಿಲ್ಲಾಧಿಕಾರಿ ದಿವ್ಯ ಪ್ರಭು, ಮಹಾನಗರ ಪಾಲಿಕೆ ಆಯುಕ್ತ ಡಾ. ಈಶ್ವರ ಉಳ್ಳಾಗಡ್ಡಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಅಜೀಜ್ ದೇಸಾಯಿ, ಪಾಲಿಕೆ ಸದಸ್ಯ ಡಾ.ಮಯೂರ ಮೋರೆ ಸೇರಿದಂತೆ ವಿವಿಧ ಅಧಿಕಾರಿಗಳು, ಜನಪ್ರತಿನಿಧಿಗಳು ಇದ್ದರು.





### ಭೂಮಿ ಕಳೆದುಕೊಂಡ ರೈತರ ಪರಿಹಾರಕ್ಕಾಗಿ ಸಚಿವ ಎಚ್.ಕೆ. ಪಾಟೀಲ ಸೂಚನೆ

# ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಸ್ಥಾಪಿಸಿರುವ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ನಾಗಾವಿ ಗ್ರಾಮದ ಬಗರ್ ಹುಕುಂ ಸಾಗುವಳಿ ರೈತರು ಭೂಮಿ ಕಳೆದುಕೊಂಡಿದ್ದು, ರೈತರ ಪರಿಹಾರಕ್ಕಾಗಿ ಉತ್ತರ ಕರ್ನಾಟಕ ಮಹಾಸಭಾದ ರಾಜ್ಯಾಧ್ಯಕ್ಷ ರವಿಕಾಂತ ಅಂಗಡಿ, ರೈತ ಮುಖಂಡರಾದ ಬಸವಣ್ಣೆಪ್ಪ ಚಿಂಚಲಿ ಹಾಗೂ ಭೂಮಿ ಕಳೆದುಕೊಂಡ ರೈತರು ಹೋರಾಟಕ್ಕೆ ಮುಂದಾಗಿದ್ದಾರೆ. ಇದನ್ನು ಅರಿತ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆಯು ನೇರವಾಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲರು ಹಾಗೂ ರೈತ



ಮುಖಂಡರೊಂದಿಗೆ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಸಭೆ ನಡೆಸಿದರು.

ಸಭೆಯಲ್ಲಿ ಮಾತನಾಡಿದ ಉತ್ತರ ಕರ್ನಾಟಕ ಮಹಾಸಭಾದ ರಾಜ್ಯಾಧ್ಯಕ್ಷ ರವಿಕಾಂತ ಅಂಗಡಿ, ವಿಶ್ವವಿದ್ಯಾಲಯಕ್ಕೆ ಜಮೀನು ಕಳೆದುಕೊಂಡ ರೈತರಿಗೆ ಕಳೆದ ಹಲವು ವರ್ಷಗಳಿಂದ ಪರಿಹಾರ ಸಿಗದೆ ಪರದಾಡುತ್ತಿರುವವರ ಬಗ್ಗೆ ವಿವರಿಸಿ, ಶಾಶ್ವತ ಪರಿಹಾರ ನೀಡಲು ರೈತರ ಪರವಾಗಿ ಮನವಿ ಮಾಡಿಕೊಂಡರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ ಮಾಜಿ ಅಧ್ಯಕ್ಷ ಸಿದ್ದು ಪಾಟೀಲ, ಡಿ.ವಾಯ್.ಎಸ್.ಪಿ ಇನಾಮದಾರ, ಡಿ.ಎಫ್.ಓ ಲೇಖರಾಜ ಮೀನಾ, ಪಿ.ಎಸ್.ಐ ಜುಲಕಟ್ಟಿ, ನಾಗಾವಿ ಗ್ರಾಮದ ರೈತರಾದ ಶಾಂತವ್ವ ಕಕ್ಕೂರ, ಫೀ-ರೋಜ್ ನದಾಫ್, ಹುಸೇನ್ ಹೊಸಮನಿ, ಮೊಹಮ್ಮದಸಾಬ ಶಲವಡಿ, ಶಿವು ಭಜಂತ್ರಿ, ಟಿಪ್ಪು ಸುಲ್ತಾನ ಬೆಲೆರಿ, ಶಶಿಕಲಾ ಆಮಟೆ, ಮಹಾದೇವಪ್ಪಾ ಬೇವಿನಮರದ, ಧರ್ಮಪ್ಪ ಮಾದರ ಮುಂತಾದವರಿದ್ದರು.

## ಶ್ರೀ ಗಣೇಶನಿಗೆ ಪೂಜೆ, ಅನ್ನಸಂತರ್ಪಣೆ




**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರಸಭೆಯಲ್ಲಿ ಗಣೇಶೋತ್ಸವದ ಅಂಗವಾಗಿ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ಕಲ್ಲಯ್ಯಜ್ಜನವರ ಸಾನ್ನಿಧ್ಯದಲ್ಲಿ ಪೂಜೆ ಮತ್ತು ಅನ್ನಸಂತರ್ಪಣೆ ಕಾರ್ಯಕ್ರಮ ಜರುಗಿತು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿಗಳು, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು, ನಗರಸಭೆ ಪೌರಾಯುಕ್ತರು, ಮಾಜಿ ಅಧ್ಯಕ್ಷರು ಮತ್ತು ಹಾಲಿ ಸದಸ್ಯರು, ನಗರಸಭೆ ಕಚೇರಿ ವ್ಯವಸ್ಥಾಪಕರು, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ನಗರಸಭೆ, ಲೇಖಾಧೀಕ್ಷಕರು, ಕಂದಾಯ ಅಧಿಕಾರಿಗಳು, ಲೆಕ್ಕಾಧೀಕ್ಷಕ ಟಿ.ಎಚ್. ದ್ಯಾವನೂರ, ಕಛೇರಿ ವ್ಯವಸ್ಥಾಪಕ ಪಿ.ಎಫ್. ಶೇರಖಾನೆ, ಎಸ್.ಎಂ. ಗುಡಿ, ಎಲ್.ಜಿ. ಗಾಡಗೋಳಿ, ಎನ್. ಎಂ. ಗೋರಣ್ಣವರ, ಎಸ್.ಎ. ಅಗಸಿಮನಿ, ಆರ್.ಎಂ. ನಾಗಲೀಕರ ಸೇರಿದಂತೆ ನಗರಸಭೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಗಣೇಶನಿಗೆ ವಿಶೇಷ ಪೂಜೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಎ.ಪಿ.ಎಂ.ಸಿ ಯಾರ್ಡ್‌ನಲ್ಲಿ ದಲಾಲ ವರ್ತಕರ ಸಂಘ, ಖರೀದಿದಾರರ ಸಂಘದ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಪ್ರತಿಷ್ಠಾಪಿಸಿರುವ ಗಣೇಶನಿಗೆ ಕಾಂಗ್ರೆಸ್ ಪಕ್ಷದ ಯುವ ಮುಖಂಡ ಕೃಷ್ಣಗೌಡ ಪಾಟೀಲ ಗುರುವಾರ ವಿಶೇಷ ಪೂಜೆ ಸಲ್ಲಿಸಿ ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಸಮಿತಿ ವತಿಯಿಂದ ಕೃಷ್ಣಗೌಡ ಪಾಟೀಲರನ್ನು ಸನ್ಮಾನಿಸಲಾಯಿತು. ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ಅಧ್ಯಕ್ಷ ತಿಮ್ಮಣ್ಣ ಕೋನರೆಡ್ಡಿ, ಗೌರವ ಅಧ್ಯಕ್ಷ ಪ್ರಮೋದ ವಾರಕರ, ಕಾರ್ಯದರ್ಶಿ ರಾಜಶೇಖರ ಮುಧೋಳ, ಉಪಾಧ್ಯಕ್ಷ ರಾಜು ಮೂಲಿಮನಿ, ಸಹ ಕಾರ್ಯದರ್ಶಿ ಚಂದ್ರಕಾಂತ ಸವದತ್ತಿ, ಖಜಾಂಚಿ ಮಹೇಶ ಗಾಣಗೇರ, ಸಹ ಖಜಾಂಚಿ ನೀತಿಶ ವಾಲಿ, ವಿನಾಯಕ ವಜ್ರೇಶ್ವರಿ, ವಿವೇಕಾನಂದ ಗುಡಿಮನಿ, ಕೊಟ್ರೇಶ ಬಾಳಿಕಾಯಿ, ಗಿರೀಶ ಅಳವಂಡಿ, ದಯಾನಂದ ಗುಂಡಪ್ಪನವರ, ವಿನಯ ಕಾಡಪ್ಪನವರ, ಪ್ರಕಾಶ ಖೋಡೆ, ಅಶೋಕ ಮಂದಾಲಿ, ಮುತ್ತಣ್ಣ ಅಂಗಡಿ, ಅಜಿತ ಪುಣೇಕರ, ಮಂಜುನಾಥ ಕವಲೂರ ಸೇರಿದಂತೆ ದಲಾಲ ವರ್ತಕರ ಸಂಘದ ಹಾಗೂ ಖರೀದಿದಾರರ ಸಂಘದ ಪದಾಧಿಕಾರಿಗಳು ಇದ್ದರು.

## ಸಂಪಾದಕೀಯ

# ಒಗ್ಗಟ್ಟಿನ ಪಾಠ ಬೋಧಿಸಿದ ಆರ್‌ಎಸ್‌ಎಸ್

ಆಂತರಿಕ ಕಚ್ಚಾಟದಿಂದ ಕರ್ನಾಟಕ ವಿಧಾನಸಭೆ ಚುನಾವಣೆಯಲ್ಲಿ ಸೋತು ಅಧಿಕಾರ ಕಳೆದುಕೊಂಡ ಬಿಜೆಪಿಗೆ ಈಗ ಸಂಘ ಪರಿವಾರ ಒಗ್ಗಟ್ಟಿನ ಪಾಠ ಬೋಧಿಸಿದೆ. ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿಯಿಂದ ಅಂತರ ಕಾಯ್ದುಕೊಂಡಿದ್ದ ಸಂಘ ಪರಿವಾರದ ನಾಯಕರು, ಈಗ ಮತ್ತೆ ಬಿಜೆಪಿಗೆ ಒಗ್ಗಟ್ಟಿನ ಪಾಠ ಮಾಡುತ್ತಿದ್ದಾರೆ.

ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಬಿ ಎಲ್ ಸಂತೋಷ್, ಕರ್ನಾಟಕ ವಿಧಾನಸಭೆ ಚುನಾವಣೆಗಿಂತ ಮುಂಚೆಯೆ ರಾಜಕಾರಣದಿಂದ ದೂರವಾಗಿದ್ದರು. ಬಿವೈ ವಿಜಯೇಂದ್ರ ಬಿಜೆಪಿ ರಾಜ್ಯಾಧ್ಯಕ್ಷರಾದ ನಂತರ ಬಿ.ಎಲ್. ಸಂತೋಷ್ ಬಹುತೇಕ ತೆರೆಮರೆಗೆ ಸರಿದಿದ್ದರು.

ಇನ್ನು ಲೋಕಸಭೆ ಚುನಾವಣೆಯ ಸಂದರ್ಭದಲ್ಲಿಯೂ ಬಿ ಎಲ್ ಸಂತೋಷ್ ರಾಜ್ಯ ರಾಜಕಾರಣದಿಂದ ಅಂತರ ಕಾಯ್ದುಕೊಂಡೇ ಬಂದಿದ್ದರು. ಸದ್ಯ ಬಿಜೆಪಿಯಲ್ಲಿ ಆಂತರಿಕ ಕಚ್ಚಾಟ ಹೆಚ್ಚಾದ ಹಿನ್ನಲೆಯಲ್ಲಿ ಬಿ.ಎಲ್. ಸಂತೋಷ್ ಮತ್ತೊಮ್ಮೆ ಎಂಟ್ರಿ ಕೊಟ್ಟಿದ್ದಾರೆ.

ಜೊತೆಗೆ ವಿಜಯೇಂದ್ರ ಸೇರಿದಂತೆ ಆಂತರಿಕ ಕಚ್ಚಾಟದಲ್ಲಿ ತೊಡಗಿರುವ ಎಲ್ಲ ನಾಯಕರಿಗೆ ಚಾಟಿ ಬೀಸಿದ್ದಾರೆ. ವಿಶೇಷವಾಗಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರಿಗೆ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಪಕ್ಷವನ್ನು ಮುನ್ನಡೆಸುವಂತೆ ಸೂಚನೆ ನೀಡಿರುವುದು, ಬಿಜೆಪಿ ರಾಜ್ಯಾಧ್ಯಕ್ಷರ ಬಗ್ಗೆ ಅಸಮಾಧಾನ ಇರುವುದನ್ನು ಸ್ಪಷ್ಟೀಕರಿಸುತ್ತದೆ.

ಇನ್ನು ಮುಡಾ ಹಗರಣವನ್ನು ಮುಂದಿಟ್ಟುಕೊಂಡು ಬಿಜೆಪಿಯ ಒಂದು ಬಣ ಬೆಂಗಳೂರಿನಿಂದ ಮೈಸೂರು ವರೆಗೆ ಪಾದಯಾತ್ರೆ ನಡೆಸಿತ್ತು. ಇನ್ನೊಂದು ಬಣ ಬೆಳಗಾವಿಯಲ್ಲಿ ಸಭೆ ನಡೆಸಿ ಬಳ್ಳಾರಿವರೆಗೆ ಪಾದಯಾತ್ರೆ ಬಗ್ಗೆ ಚಿಂತನೆ ನಡೆಸಿತ್ತು. ಆ ಮೂಲಕ ಪಕ್ಷದ ವರಿಷ್ಠರಿಗೆ ಬಿವೈ ವಿಜಯೇಂದ್ರ ಕಾರ್ಯವೈಖರಿಯ ಅಸಮಾಧಾನವನ್ನು ತಿಳಿಸುವ ಪ್ರಯತ್ನ ನಡೆದಿತ್ತು.

ವಾಲ್ಮೀಕಿ ಹಗರಣವನ್ನು ಮುಂದಿಟ್ಟುಕೊಂಡು ಬಿಜೆಪಿಯ ಅತೃಪ್ತರ ಒಂದು ಗುಂಪು ಪಾದಯಾತ್ರೆಯ ಬಗ್ಗೆ ಬಹಿರಂಗ ಹೇಳಿಕೆ ನೀಡಿತ್ತು. ಆದರೆ ವರಿಷ್ಠರ ಸೂಚನೆ ಮೇರೆಗೆ ಆ ಚರ್ಚೆ ಅಲ್ಲಿಗೆ ನಿಂತಿತ್ತು.

ಸದ್ಯ ಸಂಘ ಪರಿವಾರ ಒಗ್ಗಟ್ಟಿನ ಮಂತ್ರವನ್ನು ಬೋಧಿಸುವ ಸಂದರ್ಭದಲ್ಲಿ ಬಳ್ಳಾರಿ ಪಾದಯಾತ್ರೆ ನಡೆಸುವಂತೆ ಸೂಚನೆ ನೀಡಿದೆ. ಆ ಮೂಲಕ ಪಕ್ಷವನ್ನು ಎಲ್ಲ ಆಯಾಮಗಳಿಂದ, ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಹೋಗುವ ನಿರ್ಣಯಗಳಿಗೆ ಬದ್ಧರಾಗಿರುವಂತೆ ಸೂಚಿಸಿರುವುದು ಪಕ್ಷದ ಬೆಳವಣಿಗೆಗೆ ಒಳ್ಳೆಯದು. ಆದರೆ ಈ ಎಲ್ಲ ಬೆಳವಣಿಗೆಗಳನ್ನು ಗಮನಿಸಿದಲ್ಲಿ ಬಿಜೆಪಿಯಲ್ಲಿ ಅಶಿಸ್ತು ಕಾಣಿಸಿಕೊಂಡಿರುವುದು ಸ್ಪಷ್ಟವಾಗಿದೆ. ಬಿ ವೈ ವಿಜಯೇಂದ್ರ ಬಗ್ಗೆ ಅಸಮಾಧಾನ ಇನ್ನಷ್ಟು ಮುಂದುವರೆಯುವ ಲಕ್ಷಣಗಳು ಕೂಡ ಕಾಣಿಸಿಕೊಂಡಿದೆ.

### ಸೆಪ್ಟೆಂಬರ್ 15ರಂದು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ನಿಮಿತ್ತ ವಿಶೇಷ ಲೇಖನ

# ಬನ್ನಿ, ಪ್ರಜಾಪ್ರಭುತ್ವಕ್ಕಾಗಿ ಕೈಜೋಡಿಸೋಣ

'ಪ್ರಜಾಪ್ರಭುತ್ವದಲ್ಲಿ, ಪ್ರತಿಯೊಬ್ಬ ನಾಗರಿಕನ ಯೋಗಕ್ಷೇಮ, ವೈಯಕ್ತಿಕತೆ ಮತ್ತು ಸಂತೋಷವನ್ನು ಒಳಗೊಂಡಿರುತ್ತದೆ. ರಾಷ್ಟ್ರದ ಒಟ್ಟಾರೆ ಸಮೃದ್ಧಿ, ಶಾಂತಿ ಮತ್ತು ಸೌಹಾರ್ದತೆಯು ಮುಖ್ಯವಾಗಿದೆ. ನನಗೆ ಯುವ ಮತ್ತು ಅನುಭವಿ ಎಂಬ ಎರಡು ರೀತಿಯ ಜನರಿದ್ದಾರೆ' ಎಂದು ಡಾ. ಅಬ್ದುಲ್ ಕಲಾಂ ಹೇಳಿದ್ದಾರೆ.



ಜನರೇ ಪ್ರಜಾಪ್ರಭುತ್ವದ ಶಕ್ತಿ. ಪ್ರಜಾಪ್ರಭುತ್ವವನ್ನು ಬಲಪಡಿಸಲು ಅದರ ಮೌಲ್ಯಗಳು ಮತ್ತು ತತ್ವಗಳನ್ನು ಎತ್ತಿ ಹಿಡಿಯಲು ಪ್ರತಿ ವರ್ಷ ಸೆಪ್ಟೆಂಬರ್ 15ರಂದು ವಿಶ್ವದಾದ್ಯಂತ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ಆಚರಿಸಲಾಗುತ್ತದೆ.

ಪ್ರಜಾಪ್ರಭುತ್ವ ಎಂದರೆ ಯಾವುದೇ ವರ್ಗ, ಗುಂಪು ಅಥವಾ ವ್ಯಕ್ತಿಯ ಅಧೀನದಲ್ಲಿಲ್ಲದೆ ಜನತೆಯ ಅಧೀನದಲ್ಲಿರುವ ಸರ್ಕಾರ ಎಂದು ಹೇಳಬಹುದು. ಪ್ರಜಾಪ್ರಭುತ್ವದ ವಿಚಾರ ಇಂದು ನಿನ್ನೆಯದಲ್ಲ. ಪುರಾತನ ಕಾಲದಲ್ಲಿಯೇ ಗ್ರೀಕ್ ರಾಜ್ಯದ ಅಥೆನ್ಸ್ ನಗರದಲ್ಲಿ ಪ್ರತ್ಯಕ್ಷ ಪ್ರಜಾಪ್ರಭುತ್ವ ಅಸ್ತಿತ್ವದಲ್ಲಿತ್ತು. ಅಲ್ಲದೆ, ಪ್ರಾಚೀನ ಭಾರತದಲ್ಲಿದ್ದ ಗಣರಾಜ್ಯಗಳ ಬಗ್ಗೆ ಸಾಕಷ್ಟು ಸಂಶೋಧನೆಯಾಗಿದೆ. ಇತರ ಕೆಲವು ದೇಶಗಳಲ್ಲೂ ಇಂಥ ಪ್ರಜಾಪ್ರಭುತ್ವವಿದ್ದುದನ್ನು ಕಾಣಬಹುದಾಗಿದೆ.

ಭಾರತದ ಮುಂದಿನ ಪೀಳಿಗೆಯು ಪ್ರಜಾಪ್ರಭುತ್ವದ ಮೌಲ್ಯಾನುಸಾರ ಶಕ್ತವಾಗಬೇಕಾದರೆ ಪ್ರಜಾಪ್ರಭುತ್ವದ ಮೌಲ್ಯಗಳ ಕುರಿತು ಅರಿವಿನ ಜಾಗೃತಿ ಅತ್ಯಂತ ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರವು ಬೃಹತ್ ಮಾನವ ಸರಪಳಿಯನ್ನು ರಚಿಸುವ ಮೂಲಕ ವಿಭಿನ್ನವಾಗಿ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ಸೆ.15ರಂದು ಆಚರಿಸಲಾಗುತ್ತದೆ.

ಭಾರತದ ಇಂದಿನ ಪ್ರಜಾಪ್ರಭುತ್ವವನ್ನು ಬಹುಮತದ ಸರ್ಕಾರವೆಂದು ಕರೆಯಲಾಗಿದೆ. ಬಹುಮತ ಗಳಿಸಿದ ಪಕ್ಷ ಸರ್ಕಾರ ರಚಿಸಿದರೂ ಅಲ್ಪಸಂಖ್ಯಾತರಿಗೆ ಹಾಗೂ ರಾಜಕೀಯ ವಿರೋಧಿಗಳಿಗೆ ತೊಂದರೆ, ಅನಾನುಕೂಲತೆಗಳು ಒದಗದಂತೆ ನೋಡಿಕೊಳ್ಳುವುದು ಸರ್ಕಾರದ ಕರ್ತವ್ಯವಾಗಿರುತ್ತದೆ. ಪರಸ್ಪರ ತಿಳಿವಳಿಕೆ, ವಿಚಾರ ವಿನಿಮಯಗಳು ಪ್ರಜಾಪ್ರಭುತ್ವದ ಮುಖ್ಯ ಲಕ್ಷಣಗಳಾಗಿವೆ.

ವಿಶ್ವಸಂಸ್ಥೆಯ ಸಾಮಾನ್ಯ ಸಭೆಯು 2007ರಲ್ಲಿ ಈ ದಿನವನ್ನು ಆಚರಿಸಲು ನಿರ್ಣಯವನ್ನು ಅಂಗೀಕರಿಸಿದ ನಂತರ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ಸ್ಥಾಪಿಸಲಾಯಿತು. ಇಂಟರ್-ಪಾರ್ಲಿಮೆಂಟರಿ ಯೂನಿಯನ್ ಪ್ರಕಾರ, ಈ ನಿರ್ಣಯವು ಪ್ರಜಾಪ್ರಭುತ್ವವನ್ನು ಬಲಪಡಿಸುವ ಮತ್ತು ಬಲಪಡಿಸುವ ಕಡೆಗೆ ಸಜ್ಜಾಗಿದೆ. ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು 2008ರಲ್ಲಿ ಮೊದಲ ಬಾರಿಗೆ ಆಚರಿಸಲಾಯಿತು.

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ಆಚರಿಸುವ ಕಲ್ಪನೆಯು ಪ್ರಜಾಪ್ರಭುತ್ವದ ಸಾರ್ವತ್ರಿಕ ಘೋಷಣೆಯಿಂದ ಹುಟ್ಟಿಕೊಂಡಿದೆ. ಇದನ್ನು ಇಂಟರ್-ಪಾರ್ಲಿಮೆಂಟರಿ ಕೌನ್ಸಿಲ್ ತನ್ನ 161ನೇ ಅಧಿವೇಶನದಲ್ಲಿ ಸೆಪ್ಟೆಂಬರ್ 15, 1997ರಂದು ಅಂಗೀಕರಿಸಿತು. ಅಂದಿನಿಂದ ವಿಶ್ವದಾದ್ಯಂತ ಹಲವಾರು ಸಂಸದೀಯ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಅದೇ ರೀತಿ ಕರ್ನಾಟಕದಲ್ಲಿ ಬೃಹತ್ ಮಾನವ ಸರಪಳಿಯನ್ನು ರೂಪಿಸಲಾಗುತ್ತಿದೆ.

ವಿಶ್ವದ ಅತಿ ಉದ್ದದ ಮಾನವ ಸರಪಳಿಯನ್ನು ರೂಪಿಸುವಲ್ಲಿ ಭಾಗವಹಿಸಲು ನಾಗರಿಕರನ್ನು ಉತ್ತೇಜಿಸುವ ಮೂಲಕ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಉತ್ತೇಜಿಸುವ ಗುರಿಯನ್ನು ಹೊಂದಲಾಗಿದೆ. ಕರ್ನಾಟಕ ಸರ್ಕಾರವು ನಾಗರಿಕ ಸಮಾಜದ ಸಹಯೋಗದಲ್ಲಿ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಕ್ಕೆ ಶೋಭೆ ತರಲು ಈ ಕಾರ್ಯಕ್ರಮವನ್ನು ಆಯೋಜಿಸುವಲ್ಲಿ ಮುಂದಾಳತ್ವ ವಹಿಸುತ್ತಿದೆ. ಪ್ರಜಾಸತ್ತಾತ್ಮಕ ತತ್ವಗಳು ಮತ್ತು ಪ್ರವರ್ಧಮಾನಕ್ಕೆ ಬರುತ್ತಿರುವ ಪ್ರಜಾಪ್ರಭುತ್ವದ ಬಗ್ಗೆ ಕರ್ನಾಟಕದ ನಿರಂತರ ಬದ್ಧತೆಯ ಸಂಕೇತವಾಗಿ, ಬೀದರ್ ನಿಂದ ಚಾಮರಾಜನಗರದವರೆಗೆ ಇಡೀ ರಾಜ್ಯದಾದ್ಯಂತ ಬೃಹತ್ ಮಾನವ ಸರಪಳಿಯನ್ನು ಎಲ್ಲಾ 31 ಜಿಲ್ಲೆಗಳನ್ನು ಒಳಗೊಂಡಿದೆ. ಇದು ಅಂದಾಜು 2,500 ಕಿಮೀ ಉದ್ದವಾಗಿದೆ. ಪ್ರತಿ ಕಿಲೋಮೀಟರ್‌ಗೆ ಸರಾಸರಿ 1000ಕ್ಕೂ ಹೆಚ್ಚು ಜನರು ಒಟ್ಟು 25 ಲಕ್ಷ ಜನರು ಭಾಗವಹಿಸುವ ನಿರೀಕ್ಷೆಯಿದೆ.

ಅಂತೆಯೇ ಗದಗ ಜಿಲ್ಲೆಯ ಲಕ್ಷ್ಮೇಶ್ವರ ತಾಲೂಕಿನ ಬಾಲೆಹೊಸೂರು ಮೂಲಕ 15ರಂದು ಬೃಹತ್ ಮಾನವ ಸರಪಳಿ ನಿರ್ಮಿಸಿ, ಶಿರಹಟ್ಟಿ ತಾಲೂಕಿನ ಬೆಳ್ಳಟ್ಟಿಯಿಂದ ಮುಂಡರಗಿ ತಾಲೂಕು ಬಾಗೇವಾಡಿಯಿಂದ ಮಾನವ ಸರಪಳಿ ಹಾದುಹೋಗಿ, ಕೊಪ್ಪಳ ಜಿಲ್ಲೆಗೆ ಸಾಗುತ್ತದೆ ಎಂಬ ಮಾಹಿತಿಯಿದೆ.

ಮಾನವ ಸರಪಳಿಯಲ್ಲಿ ಭಾಗವಹಿಸುವವರು ಸ್ವಾತಂತ್ರ್ಯ, ಸಮಾನತೆ ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯದ ಪರಿಕಲ್ಪನೆಯನ್ನು ಒತ್ತಿಹೇಳುವ ಪ್ರಜಾಪ್ರಭುತ್ವದ ಬ್ಯಾನರ್ ಮತ್ತು ಪೋಸ್ಟರ್‌ಗಳನ್ನು ಪ್ರದರ್ಶಿಸುತ್ತಾರೆ. ನಮ್ಮ ಪರಿಸರವನ್ನು ರಕ್ಷಿಸುವಂತಹ ನಮ್ಮ ಮೂಲಭೂತ ಕರ್ತವ್ಯಗಳನ್ನು ನೆನಪಿಸುತ್ತಾರೆ. ಈ ಸಂದರ್ಭದಲ್ಲಿ ಮಾನವ ಸರಪಳಿಯಲ್ಲಿ ಭಾಗವಹಿಸುವವರಿಂದ ರಾಜ್ಯಾದ್ಯಂತ ಹತ್ತು ಲಕ್ಷ ಸಸಿಗಳನ್ನು ನೆಡಲು ಯೋಜಿಸಲಾಗಿದೆ.

ಒಟ್ಟಾರೆಯಾಗಿ ಪ್ರಜಾಪ್ರಭುತ್ವ ಒಂದು ಜೀವನ ವಿಧಾನವೇ ಆಗಿದೆ. ಆರ್ಥಿಕ, ಸಾಮಾಜಿಕ, ಸಮಾನತೆ ಹಾಗೂ ರಾಜಕೀಯ ಸ್ವಾತಂತ್ರ್ಯ ಒದಗಿಸಿಕೊಡಲು ಅದು ಹೋರಾಡುತ್ತದೆ. ನಾಗರಿಕರಲ್ಲಿ ಪರಸ್ಪರ ತಿಳಿವಳಿಕೆ, ವಿಚಾರ ವಿನಿಮಯ, ಸಹಕಾರ, ಸಹಾನುಭೂತಿ, ರಚನಾತ್ಮಕ ವಿಮರ್ಶೆ ಕುರಿತು ಪ್ರಜಾಪ್ರಭುತ್ವವು ತಿಳಿಸುತ್ತದೆ.



**– ಬಸವರಾಜ ಯರಗುಪ್ಪಿ.**
ಬಿಆರ್‌ಪಿ ಶಿರಹಟ್ಟಿ, ಲಕ್ಷ್ಮೇಶ್ವರ.



ಗದಗ ಲೋಕೋಪಯೋಗಿ ಇಲಾಖೆ ಹಾಗೂ ಸಿವ್ಹಿಲ್ ಗುತ್ತಿಗೆದಾರರ ಸಂಘದ ಶ್ರೀ ಗಜಾನನ ಸಮಿತಿ ವತಿಯಿಂದ ಐ.ಬಿ. ಸಿಬ್ಬಂದಿಯವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಸಂಘದ ವ್ಹಿ.ಎನ್. ಪಾಟೀಲ, ಎಮ್.ಎಸ್. ಪಾಟೀಲ, ಕೆ.ವ್ಹಿ. ಪಾಟೀಲ, ಎಸ್.ಕೆ. ಪಾಟೀಲ, ಕನಕಪ್ಪ ಹಾದಿಮನಿ, ಎಮ್.ಬಿ. ಅಂಗಡಿ, ಎಸ್.ಪಿ. ಮುತ್ತಿನಪೆಂಡಿಮಠ, ರಮೇಶ ರಂಗಪ್ಪನವರ, ಆಂಜನೇಯ ಕಟಗಿ, ಎಮ್.ಎಮ್. ದಾಯಮ್ಮನವರ, ಸಿ.ಜಿ. ಬರಾದಾರ, ತೋಟಪ್ಪ ಗಾಗೇರ, ಆರ್.ವೈ. ಹೊನ್ನಿನಾಯ್ಕರ, ನಾಗರಾಜ ಮಾಗಡಿ, ಮಂಜುನಾಥ ಸೂರಪ್ಪ ಗೌಡ್ರ, ರಯಾಜ ದಾಯಮ್ಮನವರ, ಸಾಧ್ವೀಕ ಕೊಟ್ನಿಕಲ್ ಹಬೀಬ, ಸಿಬ್ಬಂದಿ ವರ್ಗದವರು ಹಾಗೂ ಗುತ್ತಿಗೆದಾರರ ಸಂಘದ ಸದಸ್ಯರು ಉಪಸ್ಥಿತರಿದ್ದರು.

# ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

2024-25ನೇ ಸಾಲಿನಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯಂದು ಪರಿಶಿಷ್ಟ ವರ್ಗದ ಜನಾಂಗದ ಏಳಿಗೆಗಾಗಿ ಶ್ರಮಿಸಿದ ವ್ಯಕ್ತಿಗಳಿಗೆ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿ ನೀಡಿ ಗೌರವಿಸಲು ಸರ್ಕಾರ ನಿರ್ಧರಿಸಿದೆ. ಅಕ್ಟೋಬರ್ 17ರಂದು ನಡೆಯುವ ಮಹರ್ಷಿ ವಾಲ್ಮೀಕಿ ಜಯಂತಿಯಂದು ಸದರ ಪ್ರಶಸ್ತಿಯನ್ನು ನೀಡಲು ಗದಗ ಜಿಲ್ಲೆಯ ವ್ಯಾಪ್ತಿಯಲ್ಲಿ ಪ್ರಶಸ್ತಿಗೆ ಅರ್ಹ ವ್ಯಕ್ತಿಗಳನ್ನು ಆಯ್ಕೆ ಮಾಡಬೇಕಾಗಿದೆ.

ಸಮಾಜ ಸೇವೆ ಕೈಗೊಂಡ ಹಾಗೂ ಪರಿಶಿಷ್ಟ ಪಂಗಡದ ಜನಾಂಗದ ಏಳಿಗೆಗಾಗಿ ಶ್ರಮಿಸಿದ ಬಗ್ಗೆ ಛಾಯಾಚಿತ್ರ ಹಾಗೂ ದಾಖಲೆ ಸಮೇತವಾಗಿ ಅರ್ಜಿಯನ್ನು ಉಪನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ರೂ.ನಂ: 107, ಮೊದಲನೇ ಮಹಡಿ, ಜಿಲ್ಲಾಡಳಿತ ಭವನ, ಹುಬ್ಬಳ್ಳಿ ರೋಡ್ ಗದಗ ಈ ಕಚೇರಿಗೆ ಸೆಪ್ಟೆಂಬರ್ 17 ರೊಳಗೆ ಖುದ್ದಾಗಿ ಸಲ್ಲಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಂ. ಪುಟ್ಟರಾಜರ ಮಹಾಪೂಜೆ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**



ಗಾನಯೋಗಿ, ಶಿವಯೋಗಿ ಡಾ. ಪಂಡಿತ್ ಪುಟ್ಟರಾಜ ಗವಾಯಿಗಳವರ 14ನೇ ಪುಣ್ಯಸ್ಮರಣೆ ಕಾರ್ಯಕ್ರಮದ ಅಂಗವಾಗಿ ಕರ್ನಾಟಕ ರಕ್ಷಣಾ ವೇದಿಕೆ ಮತ್ತು ಡಾ. ಶ್ರೀ ಪಂಡಿತ ಪುಟ್ಟರಾಜ ಗವಾಯಿಗಳ ಸದ್ಭಕ್ತರ ವತಿಯಿಂದ ಮುಳುಗುಂದ ರೋಡ್ ಫತ್ತೆಪೂರ ಬಿಲ್ಡಿಂಗ್‌ನಲ್ಲಿ ಸೆ.13ರ ಬೆಳಿಗ್ಗೆ 9ಕ್ಕೆ ವೀರೇಶ್ವರ ಪುಣ್ಯಾಶ್ರಮದ ಪೂಜ್ಯ ಶ್ರೀ ಕಲ್ಲಯ್ಯಜ್ಜನವರ ಸಾನ್ನಿಧ್ಯದಲ್ಲಿ ಮಹಾಪೂಜೆ, ಮಧ್ಯಾಹ್ನ 12.10ಕ್ಕೆ ಮಹಾ ಅನ್ನಸಂತರ್ಪಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಸದ್ಭಕ್ತರು ಆಗಮಿಸಿ ಲಿಂ. ಡಾ. ಶ್ರೀ ಪಂಡಿತ ಪುಟ್ಟರಾಜ ಗವಾಯಿಗಳರವರ ಕೃಪೆಗೆ ಪಾತ್ರರಾಗಬೇಕೆಂದು ಕರವೇ ಗದಗ ಜಿಲ್ಲಾ ಗೌರವಾಧ್ಯಕ್ಷ ನಿಂಗನಗೌಡ ಮಾಲಿಪಾಟೀಲ ಪತ್ರಿಕಾ ಪ್ರಕಟಣೆಯ ಮೂಲಕ ವಿನಂತಿಸಿದ್ದಾರೆ.

### ಜಲಾಗಾರಗಳನ್ನು ವೀಕ್ಷಿಸಿದ ಶಾಸಕ ಡಾ. ಚಂದ್ರು ಲಮಾಣಿ ಸೂಚನೆ

# ಅಧಿಕಾರಿಗಳು ಜವಾಬ್ದಾರಿಯಿಂದ ನಡೆದುಕೊಳ್ಳಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕುಡಿಯುವ ನೀರು ಸರಬರಾಜಿನ ಬಗ್ಗೆ ನಿರ್ಲಕ್ಷ್ಯ ತೋರದೇ ಜವಾಬ್ದಾರಿಯುತವಾಗಿ ನಡೆದುಕೊಳ್ಳಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಸ್ಥಳೀಯ ಪುರಸಭೆ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ತಾಕೀತು ಮಾಡಿದರು.



ಅವರು ಬುಧವಾರ ಪಟ್ಟಣದಲ್ಲಿನ ನೀರು ಸರಬರಾಜು ಜಲಾಗಾರಗಳನ್ನು ವೀಕ್ಷಿಸಿ ಉದ್ಭವಿಸಿರುವ ಕುಡಿಯುವ ನೀರಿನ ಸಮಸ್ಯೆಯ ಬಗ್ಗೆ ಮಾಹಿತಿ ಪಡೆದು ಮಾತನಾಡಿದರು. ಪಟ್ಟಣಕ್ಕೆ ತುಂಗಭದ್ರಾ ನದಿಯಿಂದ ನೀರು ಸರಬರಾಜಾಗುವ ಪೈಪ್‌ಲೈನ್ ಮತ್ತು ಯಂತ್ರೋಪಕರಣಗಳು ಪದೇ ಪದೇ ದುರಸ್ಥಿಗೆ ಬರುತ್ತಿದ್ದು, ಹೊಸ ಪೈಪ್‌ಲೈನ್ ಯೋಜನೆ ಅನುದಾನಕ್ಕಾಗಿ 3 ಹಂತದ ಕ್ರಿಯಾಯೋಜನೆ ಸಿದ್ಧಪಡಿಸಿ ಸರಕಾರಕ್ಕೆ ಸಲ್ಲಿಸಲಾಗಿದೆ. ಕುಡಿಯುವ ನೀರಿನ ಶಾಶ್ವತ ಪರಿಹಾರಕ್ಕಾಗಿ ಸಂಬಂಧಪಟ್ಟ ಸಚಿವರು, ಅಧಿಕಾರಿಗಳನ್ನು ಸಂಪರ್ಕಿಸಿ ದೊಡ್ಡ ಮೊತ್ತದ ಅನುದಾನ ತರುವ ಬಗ್ಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದೇನೆ.

ಈಗಾಗಲೇ ಅಮೃತ 2.0 ಯೋಜನೆಯಲ್ಲಿ ಲಭ್ಯವಿರುವ 33 ಕೋಟಿ ರೂ ಅನುದಾನಲ್ಲಿ ಕಾಮಗಾರಿ ಕೈಗೊಳ್ಳಲು ಅಧಿಕಾರಿಗಳೊಂದಿಗೆ ಚರ್ಚಿಸಲಾಗಿದೆ. ಆದಾಗ್ಯೂ ಕಾಮಗಾರಿ ಸಾಕಾರಗೊಳ್ಳುವುದು ವಿಳಂಬವಾಗಬಹುದು. ಆದ್ದರಿಂದ ಸ್ಥಳೀಯವಾಗಿ ಲಭ್ಯವಿರುವ ಬೋರ್‌ವೆಲ್‌ಗಳ ಮೂಲಕ ನೀರು ಸರಬರಾಜು ಮಾಡುವ ವ್ಯವಸ್ಥೆ ಮಾಡಿಕೊಳ್ಳಿ. ಪಟ್ಟಣದಲ್ಲಿರುವ 100ಕ್ಕೂ ಹೆಚ್ಚು ಬೋರ್‌ವೆಲ್, ಯಂತ್ರೋಪಕರಣಗಳನ್ನು ದುರಸ್ಥಿ ಮಾಡಿಸಿ ಜಲಾಗಾರಗಳಿಗೆ ಸಂಪರ್ಕ ಕಲ್ಪಿಸಿ ಆ ಮೂಲಕ ನೀರು ಸರಬರಾಜು ಮಾಡಬೇಕು. ಈ ಕಾರ್ಯದಲ್ಲಿ ಆಯಾ ವಾರ್ಡ್‌ಗಳ ಸದಸ್ಯರೊಂದಿಗೆ ಚರ್ಚಿಸಿ ಅವರ ಸಲಹೆ-ಸೂಚನೆ ಪಾಲಿಸಿ. ನೀರು ಸರಬರಾಜಿಗಾಗಿ ಪುರಸಭೆಯಿಂದ ಸಾಕಷ್ಟು ಹಣ ಖರ್ಚಾಗುತ್ತಿದ್ದರೂ ಸಮಸ್ಯೆಗಳು ಹೆಚ್ಚಾಗುತ್ತಿವೆ. ಈ ಬಗ್ಗೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಈ ವೇಳೆ ಪುರಸಭೆ ಸದಸ್ಯರಾದ ಪ್ರವೀಣ ಬಾಳಿಕಾಯಿ, ಮಹಾದೇವಪ್ಪ ಅಣ್ಣಿಗೇರಿ, ಪುಲಿಕೇಶ ಉಪನಾಳ, ನೀಲಪ್ಪ ಹತ್ತಿ, ಸತೀಶ ಕಾಡಣ್ಣವರ, ಮುಖ್ಯಾಧಿಕಾರಿ ಮಹೇಶ ಹಡಪದ, ಮಂಜುನಾಥ ಮುದಗಲ್, ಹನಮಂತಪ್ಪ ನಂದೆಣ್ಣವರ ಸೇರಿದಂತೆ ಸಾರ್ವಜನಿಕರು, ವಾಟರ್‌ಮೆನ್‌ಗಳು ಇದ್ದರು.

# ಮಾನವ ಸರಪಳಿ ಕಾರ್ಯಕ್ರಮದ ಪೋಸ್ಟರ್ ಬಿಡುಗಡೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಗ್ರಾಮ ಗಂಗೋತ್ರಿ ಸಭಾಂಗಣದಲ್ಲಿ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲರು ಸೆಪ್ಟೆಂಬರ್ 15ರಂದು ಕರ್ನಾಟಕ ಸರ್ಕಾರದಿಂದ ಜರುಗಲಿರುವ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವದ ದಿನಾಚರಣೆಯ ಮಾನವ ಸರಪಳಿ ಕಾರ್ಯಕ್ರಮದ ಕುರಿತಾದ ಪೋಸ್ಟರ್‌ಗಳನ್ನು ಬಿಡುಗಡೆಗೊಳಿಸಿದರು.

ಪ್ರಜಾಪ್ರಭುತ್ವದ ಆಶಯಗಳನ್ನು ಗಟ್ಟಿಗೊಳಿಸಲು ಗದಗ ಜಿಲ್ಲೆಯಲ್ಲಿ ಸುಮಾರು 61 ಕಿಲೋಮೀಟರ್‌ಗಳ ಮಾನವ ಸರಪಳಿಯನ್ನು ಅಂದಾಜು 52 ಸಾವಿರ ಜನರು ಭಾಗವಹಿಸುವುದರ ಮೂಲಕ ಆಚರಿಸಲಿದ್ದಾರೆ. ಸಂವಿಧಾನ ಪೀಠಿಕೆಯನ್ನು ಓದಿ ರಾಷ್ಟ್ರಗೀತೆಯನ್ನು ಹೇಳಿ, ಘೋಷಣೆಗಳೊಂದಿಗೆ ಈ ವಿಶಿಷ್ಟ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಸಚಿವರು ಕರೆ ನೀಡಿದರು.

ಈ ಸಂದರ್ಭದಲ್ಲಿ ವಿ.ಪ ಸಭಾಪತಿ ಬಸವರಾಜ ಹೊರಟ್ಟಿ, ವಿ.ಪ ಸದಸ್ಯ ಎಸ್.ವಿ. ಸಂಕನೂರು, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ವಿಶ್ವವಿದ್ಯಾಲಯದ ಕುಲ ಸಚಿವರು ಮತ್ತು ಸಿಬ್ಬಂದಿ ವರ್ಗದವರು, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ್ ಪೋತದಾರ ಹಾಜರಿದ್ದರು.

# ಹೈಸ್ಪೀಡ್ ಇಂಟರ್‌ನೆಟ್ ಸೇವೆ ಉದ್ಘಾಟನೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಹಳ್ಳಿಯ ಗ್ರಾಹಕರಿಗೆ ಹೆಚ್ಚಿನ ಅನುಕೂಲವನ್ನು ಕಲ್ಪಿಸಲು ಬಿಎಸ್‌ಎನ್‌ಎಲ್ ಪಾಪನಾಶಿಯ ಜೆ.ಜಿ. ಇಂಟರ್‌ನ್ಯಾಷನಲ್ ಶಾಲೆಯಲ್ಲಿ ಓಎಲ್‌ಟಿ ಫೈಬರ್ ಆಪ್ಟಿಕ್ ಹೈಸ್ಪೀಡ್ ಇಂಟರ್‌ನೆಟ್ ಸೇವೆಯನ್ನು ಪ್ರಾರಂಭಿಸಿತು. ಉದ್ಘಾಟನೆಯನ್ನು ಬಿಎಸ್‌ಎನ್‌ಎಲ್ ಧಾರವಾಡ ಟೆಲಿಕಾಂನ ಜನರಲ್ ಮ್ಯಾನೇಜರ್ ಧನಂಜಯ್ ಕುಮಾರ್ ತ್ರಿಪಾಠಿ ನೆರವೇರಿಸಿದರು. ಮುಖ್ಯ ಅತಿಥಿಯಾಗಿ ಬಿಎಸ್‌ಎನ್‌ಎಲ್‌ನ ರಾಜೇಶ ಕ್ವದಂ, ಶಾಲೆಯ ಚೇರಮನ್ ಆಯ್.ಎಸ್. ಪೂಜಾರ ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ಧನಂಜಯ್ ಕುಮಾರ್ ತ್ರಿಪಾಠಿ ಮಾತನಾಡಿ, ಬಿಎಸ್‌ಎನ್‌ಎಲ್ ಹೈಸ್ಪೀಡ್ ಇಂಟರ್‌ನೆಟ್ ಎಲ್ಲಾ ಜನರಿಗೆ ತಲುಪಿಸಲು ಈ ಓಎಲ್‌ಟಿಯನ್ನು ಸ್ಥಾಪನೆ ಮಾಡಿದ್ದೇವೆ. ಇದರ ಸದುಪಯೋಗವನ್ನು ಸುತ್ತಮುತ್ತಲಿನ ಎಲ್ಲಾ ಗ್ರಾಮಸ್ಥರು ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು. ಈ ಸಂದರ್ಭದಲ್ಲಿ ಡಿವಿಜನಲ್ ಇಂಜಿನಿಯರ್ ಹುಚ್ಚಪ್ಪ ಶಿರಹಟ್ಟಿ, ಚಂದ್ರಕಾಂತ್ ಚವ್ಹಾಣ, ಭರತ್, ಸಂಜಯ್ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.



# ಎಲ್ಲರ ಸಹಕಾರ ಸದಾ ಇರಲಿ



**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಸಂಘದ ಪ್ರತಿಯೊಬ್ಬ ಸದಸ್ಯರ ಸಹಕಾರದಿಂದ ಪ್ರಸ್ತುತ ವರ್ಷದಲ್ಲಿ 5.83 ಲಕ್ಷ ರೂ ಲಾಭ ಪಡೆದು ಮಾದರಿ ಸಹಕಾರ ಸಂಘವಾಗಿ ಹೊರಹೊಮ್ಮುತ್ತಿರುವುದು ಹೆಮ್ಮೆ ಎನಿಸುತ್ತದೆ ಎಂದು ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ರುದ್ರಪ್ಪ ಮುಸ್ಕಿನಭಾವಿ ಸಂತಸ ವ್ಯಕ್ತಪಡಿಸಿದರು.

ಇಲ್ಲಿಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತ ನಂ-2ರ 106ನೇ ವಾರ್ಷಿಕ ಸಾಧಾರಣ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರಿಯಾಯತಿ ದರದ ಬಿತ್ತನೆಯ ಬೀಜ ವಿತರಣೆ, ಪಿಗ್ಮಿ ಸಾಲ, ರೈತರಿಗೆ ವಿವಿಧ ಯೋಜನೆಯಡಿ ನೀಡಿದ ಸಾಲ ಸೌಲಭ್ಯ ಸೇರಿದಂತೆ ವಿವಿಧ ರೂಪದಲ್ಲಿ ಈ ವರ್ಷದಲ್ಲಿ 5.83 ಲಕ್ಷ ಲಾಭ ಗಳಿಸಿದ್ದು, ತಮ್ಮೆಲ್ಲರ ಸಹಕಾರ ಹೀಗೆ ಮುಂದುವರೆಯಲಿ. ತಮ್ಮ ಉಳಿತಾಯದ ಹಣವನ್ನು ಸಂಘದಲ್ಲಿ ತೊಡಗಿಸಿ ಆರ್ಥಿಕ ಶಕ್ತಿಯನ್ನು ಹೆಚ್ಚಿಸಿಕೊಳ್ಳಬೇಕು ಎಂದು ವಿನಂತಿಸಿಕೊಂಡರು.

ಸಂಘದಲ್ಲಿ 325 ಜನ ಸದಸ್ಯರಿದ್ದು, ಸದರಿ ಸಾಲಿನಲ್ಲಿ 3 ಸಾವಿರ ಶೇರು ಜಮಾ ಆಗಿದೆ. ಒಟ್ಟು 1291960 ರೂ ಶೇರು ಬಂಡವಾಳ ಹೊಂದಿರುತ್ತದೆ. ಆರ್ಥಿಕ ಕ್ಷೇತ್ರದಲ್ಲಿನ ಬದಲಾವಣೆಗಳ ನಡುವೆಯೂ ಸಹಕಾರಿ ಸಂಘಗಳು ಯಶಸ್ವಿಯಾಗಿ ಕೆಲಸ ನಿರ್ವಹಿಸುತ್ತಿರುವುದರ ಪರಿಣಾಮವಾಗಿ ಸಂಘವು ಠೇವಣಿಯಲ್ಲಿ ನಿರೀಕ್ಷಿತ ಪ್ರಗತಿ ಸಾಧಿಸಲು ಸಾಧ್ಯವಾಗಿದೆ. ಆರಂಭದಲ್ಲಿ 87.50 ಲಕ್ಷ ಠೇವು ಜಮಾ ಇದ್ದು, ಈ ಆರ್ಥಿಕ ವರ್ಷಾಂತ್ಯಕ್ಕೆ 92.26 ಲಕ್ಷ ಠೇವು ಜಮಾ ಇರುತ್ತದೆ ಎಂದು ವಿವರಿಸಿದರು.

ಇದೇ ಸಂದರ್ಭದಲ್ಲಿ 70 ವರ್ಷ ಮೇಲಟ್ಟ ಸಂಘದ ಸದಸ್ಯರಾದ ಸಿ.ಬಿ. ವಸ್ತ್ರದ, ಕಾಶಮ್ಮ ಲಕ್ಕುಂಡಿ, ಈಶ್ವರಪ್ಪ ಕುಂಬಾರ, ಅಂದಾನಯ್ಯ ನರಗುಂದಮಠ, ಮಹಾದೇವಪ್ಪ ಕವಲೂರು, ಶಿವನಗೌಡ ಕಮತರ ಅವರನ್ನು ಗೌರವಿಸಲಾಯಿತು.

ಸಂಘದ ಉಪಾಧ್ಯಕ್ಷ ರುದ್ರಪ್ಪ ವಡ್ಡರ, ನಿರ್ದೇಶಕರಾದ ಮಲ್ಲನಗೌಡ ಪಾಟೀಲ, ಗವಿಶಿದ್ದಪ್ಪ ರೇವಡಿ, ಕಲ್ಲಪ್ಪ ಬೆಟಗೇರಿ, ಶಂಕ್ರಪ್ಪ ಕುಂಬಾರ, ಮಂಜುನಾಥ ಕರಿಯಲ್ಲಪ್ಪನವರ, ಅಂದಾನಯ್ಯ ಪತ್ರಿಮಠ, ಅನ್ನಪೂರ್ಣಾ ಹಡಗಲಿ, ಸಕ್ರಪ್ಪ ರಾಮತಾಳ ವೇದಿಕೆಯಲ್ಲಿದ್ದರು. ಮಂಜುನಾಥ ಗದಗಿನ ನಿರೂಪಿಸಿದರು. ಮಹೇಶ ಮುಸ್ಕಿನಭಾವಿ ವಂದಿಸಿದರು.

ಪ್ರಜಾಪ್ರಭುತ್ವ ದಿನದ ಅಂಗವಾಗಿ ಮಾನವ ಸರಪಳಿ | ಅಧಿಕಾರಿಗಳ ಸಭೆಯಲ್ಲಿ ತಹಸೀಲ್ದಾರ ವಾಸುದೇವ ಸ್ವಾಮಿ

# ಅಭೂತಪೂರ್ವ ಯಶಸ್ಸಿನಲ್ಲಿ ಪಾಲ್ಗೊಳ್ಳಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ಬೀದರ್‌ನಿಂದ ಚಾಮರಾಜನಗರದವರೆಗೆ ನಡೆಯಲಿರುವ ಮಾನವ ಸರಪಳಿ ಕಾರ್ಯಕ್ರಮಕ್ಕೆ ತಾಲೂಕಿನಾದ್ಯಂತ ಜನಪ್ರತಿನಿಧಿಗಳು, ಸ್ಥಳೀಯ ಜನಪ್ರತಿನಿಧಿಗಳು, ಸಂಘಟನೆಗಳು, ಸಂಘ-ಸಂಸ್ಥೆಗಳು, ಶಾಲಾ-ಕಾಲೇಜುಗಳು ಹಾಗೂ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದ್ದು, ಸೆ.15ರಂದು ಮುಂಜಾನೆ ಸರಿಯಾಗಿ 9 ಗಂಟೆಗೆ ತಾಲೂಕಿನ ಸೂರಣಗಿ ಗ್ರಾಮದಿಂದ ಪ್ರಾರಂಭವಾಗುವ ಬೃಹತ್ ಮಾನವ ಸರಪಳಿ ಅಭೂತಪೂರ್ವ ಯಶಸ್ಸು ಕಾಣುವ ವಿಶ್ವಾಸವನ್ನು ಸಮಸ್ತ ಆಡಳಿತ ಹೊಂದಿದೆ ಎಂದು ತಹಸೀಲ್ದಾರ ವಾಸುದೇವ ಸ್ವಾಮಿ ಹೇಳಿದರು.

ಅವರು ತಹಸೀಲ್ದಾರ ಕಚೇರಿಯಲ್ಲಿ ಗುರುವಾರ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ಮಾನವ ಸರಪಳಿ ನಿರ್ಮಿಸುವ ಕುರಿತು ವಿವಿಧ ಸಂಘಟನೆಗಳ, ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಇಲಾಖೆ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದರು.

ರಾಜ್ಯಾದ್ಯಂತ ಸೆ.15ರಂದು ಬೆಳಿಗ್ಗೆ 9 ಗಂಟೆಯಿಂದ ಮಾನಮ ಸರಪಳಿ ನಿರ್ಮಿಸಿ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮವನ್ನು ಆಚರಿಸಲು ಸರಕಾರದ ನಿರ್ದೇಶನ ನೀಡಿದಂತೆ ತಾಲೂಕಿನ ಬಾಲೇಹೊಸೂರ ಸರಹದ್ದಿನಿಂದ ಪ್ರಾರಂಭವಾಗಿ ಸೂರಣಗಿ, ನೆಲೋಗಲ್ ಗ್ರಾಮದ ಸರಹದ್ದಿನವರೆಗೆ ಸುಮಾರು 18 ಕಿ.ಮಿ ಮಾನವ ಸರಪಳಿ ನಿಮಾಣ ಮಾಡಲಿದ್ದು, ತಾಲೂಕಿನಾದ್ಯಂತ ಶಾಲಾ-ಕಾಲೇಜು ವಿದ್ಯಾರ್ಥಿಗಳು, ಶಿಕ್ಷಕರು, ಪ್ರಾಚಾರ್ಯರು, ಉಪನ್ಯಾಸಕರು, ಬೋಧಕೇತರ ಸಿಬ್ಬಂದಿಗಳು, ಎಲ್ಲ ಇಲಾಖೆಗಳವರು, ವಿವಿಧ ಕನ್ನಡಪರ ಸಂಘಟನೆಗಳು, ದಲಿತಪರ ಸಂಘಟನೆಗಳು, ರೈತ ಸಂಘಟನೆಗಳು, ಸ್ತ್ರೀಶಕ್ತಿ ಮಹಿಳಾ ಸ್ವ-ಸಹಾಯ ಸಂಘಗಳು ಹಾಗೂ ಸಾರ್ವಜನಿಕರು ಸ್ವಯಂಪ್ರೇರಿತರಾಗಿ ಪಾಲ್ಗೊಳ್ಳಲಿದ್ದಾರೆ. ಸುಮಾರು 18ರಿಂದ 20 ಸಾವಿರ ಜನರು ಸೇರುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲಿದ್ದಾರೆ. ಇದಕ್ಕಾಗಿ ತಾಲೂಕಾಡಳಿತದಿಂದ ಸಕಲ ಸಿದ್ಧತೆಗಳನ್ನು ಮಾಡಲಾಗಿದೆ ಎಂದರು.

ಈಗಾಗಲೇ ಗದಗ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಮತ್ತು ಜಿ.ಪಂ ಕಾರ್ಯನಿರ್ವಹಕ ಅಧಿಕಾರಿ ಸಿ.ಭರತ್ ಅವರು ತಾಲೂಕಾ ವ್ಯಾಪ್ತಿಗೆ ಬರುವ ಸೂರಣಗಿ, ಬಾಲೇಹೊಸೂರು ಗ್ರಾಮಗಳಿಗೆ ಭೇಟಿ ನೀಡಿ ಅಲ್ಲಿನ ಜನಪ್ರತಿನಿಧಿಗಳು, ಸಂಘ-ಸಂಸ್ಥೆಗಳು, ಸಾರ್ವಜನಿಕರೊಂದಿಗೆ ಚರ್ಚೆ ನಡೆಸಿ, ಎಲ್ಲ ಗ್ರಾಮಸ್ಥರು ಕಾರ್ಯಕ್ರಮ ಯಶಸ್ವಿಗೆ ಸಂಪೂರ್ಣ ಸಹಕಾರ ನೀಡುವದಾಗಿ ಭರವಸೆ ನೀಡಿದ್ದಾರೆ ಎಂದರು.



ಅಂದು ಮುಂಜಾನೆ 9.15ಕ್ಕೆ ಸಂವಿಧಾನ ಪೀಠಿಕೆಯನ್ನು ಓದಿ, ರಾಷ್ಟ್ರಗೀತೆ, ಜೈಹಿಂದ್ ಘೋಷಣೆಗಳನ್ನು ಮೊಳಗಿಸಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಮಕ್ಕಳಿಗೆ ಹೋಗಿ ಬರಲು ವಾಹನಗಳ ವ್ಯವಸ್ಥೆ ಕಲ್ಪಿಸಿದ್ದು, ಎಲ್ಲರೂ ಸ್ವಯಂಪ್ರೇರಿತರಾಗಿ ಬನ್ನಿ, ಅಭೂತಪೂರ್ವ ಯಶಸ್ಸಿನಲ್ಲಿ ಪಾಲ್ಗೊಳ್ಳಿ ಎಂದು ವಾಸುದೇವ ಸ್ವಾಮಿ ಕರೆ ನೀಡಿದರು.

ಈ ಸಂದರ್ಭದಲ್ಲಿ ತಾ.ಪಂ ಇ.ಓ. ಕೃಷ್ಣಪ್ಪ ಧರ್ಮರ, ಪಿ.ಎಸ್.ಐ ಈರಪ್ಪ ರಿತ್ತಿ, ಗ್ರೇಡ್ 2 ತಹಸೀಲ್ದಾರ ಮಂಜುನಾಥ ಅಮಾಸಿ, ಉಪತಹಸೀಲ್ದಾರ ಪ್ರಶಾಂತ ಕಿಮಾಯಿ, ಪ್ರಶಾಂತ ಸನದಿ, ಹಿರಿಯ ಆರೋಗ್ಯ ನಿರೀಕ್ಷಕ ಬಿ.ಎಸ್. ಹಿರೇಮಠ, ಸಾರಿಗೆ ಘಟಕ ವ್ಯವಸ್ಥಾಪಕಿ ಸವಿತಾ ಆದಿ, ಶಿವಾನಂದ ಅಜ್ಜಣ್ಣವರ, ಜೆ.ಎ. ಮನಿಯಾರ, ಈಶ್ವರ ಮೇಡ್ಲೇರಿ ಸೇರಿದಂತೆ ಅನೇಕರಿದ್ದರು.

ಬಿ ವೃಂದದ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆ

# ಅಭ್ಯರ್ಥಿಗಳು ಪಾಲಿಸಬೇಕಾದ ಸೂಚನೆಗಳು



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಲೋಕಸೇವಾ ಆಯೋಗವು ಸೆಪ್ಟೆಂಬರ್ 14 ಮತ್ತು 15ರಂದು ನಡೆಸಲಿರುವ ವಿವಿಧ ಇಲಾಖೆಗಳ ಗ್ರೂಪ್ ಬಿ ವೃಂದದ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳು ಈ ಕೆಳಗಿನ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕೆಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ತಿಳಿಸಿದ್ದಾರೆ.

ಅಭ್ಯರ್ಥಿಗಳು ಪರೀಕ್ಷಾ ವೇಳೆಯಲ್ಲಿ ಶೌಚಾಲಯಕ್ಕೆ ತೆರಳಿ ಮರಳಿ ಬರುವಾಗ ಸದರಿ ಅಭ್ಯರ್ಥಿಗಳನ್ನು ಮತ್ತೊಮ್ಮೆ ತಪಾಸಣೆಗೆ ಒಳಪಡಿಸುವುದು. ಶೂ-ಸಾಕ್ಸ್‌ಗಳನ್ನು ಧರಿಸಲು ಅವಕಾಶವಿರುವುದಿಲ್ಲ. ಸಾಧಾರಣ ಚಪ್ಪಲಿಯನ್ನು ಧರಿಸಿ ಪರೀಕ್ಷೆಗೆ ಹಾಜರಾಗಬೇಕಾಗಿರುತ್ತದೆ. ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಹಾಜರಾಗುವ ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯೊಳಗೆ ಯಾವುದೇ ಆಧುನಿಕ ಉಪಕರಣಗಳು, ಮೊಬೈಲ್, ಬ್ಲುಟೂಥ್, ಕ್ಯಾಲ್ಕುಲೇಟರ್, ವೈಟ್‌ಫ್ಲುಡ್, ವೈರ್‌ಲೆಸ್ ಸೆಟ್ಸ್, ಪೇಪರ್-ಬುಕ್ಸ್‌ಗಳನ್ನು ತೆಗೆದುಕೊಂಡು ಹೋಗಲು ಅವಕಾಶ ನೀಡಬಾರದು.

ತುಂಬು ತೋಳಿನ ಶರ್ಟ್ ಮತ್ತು ಯಾವುದೇ ಆಭರಣಗಳನ್ನು (ಮಂಗಳಸೂತ್ರ ಹಾಗೂ ಕಾಲುಂಗುರಗಳನ್ನು ಹೊರತುಪಡಿಸಿ) ಪುಲ್ಲೋವರ್ಸ್, ಜಾಕೆಟ್ಸ್ ಮತ್ತು ಸ್ವೆಟರ್‌ಗಳನ್ನು ಧರಿಸಿ ಹಾಜರಾಗುವುದನ್ನು ನಿಷೇಧಿಸುವುದು. ಮೆಟಲ್ ವಾಟರ್ ಬಾಟಲ್ಸ್ ಅಥವಾ ನಾನ್ ಟ್ರಾನ್ಸಪರಂಟ್ ವಾಟರ್ ಬಾಟಲ್‌ಗಳನ್ನು ಪರೀಕ್ಷಾ ಕೊಠಡಿಯೊಳಗೆ ತೆಗೆದುಕೊಂಡು ಹೋಗುವುದನ್ನು ನಿಷೇಧಿಸುವುದು. ಕಿವಿ, ಬಾಯಿಯನ್ನು ಮುಚ್ಚಿಕೊಳ್ಳುವಂತೆ ಅಥವಾ ಯಾವುದೇ ರೀತಿಯ ಫಿಲ್ಟರ್ ಇರುವ ಫೇಸ್ ಮಾಸ್ಕ್ ಅನ್ನು ಧರಿಸಿ ಪರೀಕ್ಷಾ ಕೊಠಡಿ ಪ್ರವೇಶಿಸಲು ಅನುಮತಿ ನೀಡಬಾರದು.

ವಿಶೇಷವಾಗಿ ಐಐಟಿ ಮತ್ತು ನೀಟ್ ಪರೀಕ್ಷೆಗಳಲ್ಲಿ ಅನುಸರಿಸುವಂತೆ ಅಭ್ಯರ್ಥಿಗಳ ಕಿವಿಯಲ್ಲಿ ಯಾವುದೇ ಎಲೆಕ್ಟ್ರಾನಿಕ್ ಡಿವೈಸ್ ಮತ್ತು ಮೈಕ್ರೋಫೋನ್ ಬಳಸದಿರುವ ಬಗ್ಗೆ ಎಲ್‌ಇಡಿ ಬ್ಯಾಟರಿಯನ್ನು ಬಳಸಿ ಕಿವಿಗಳನ್ನು ತಪಾಸಣೆ ನಡೆಸುವುದು.

ಎರಡನೇ ಹಂತದಲ್ಲಿ ಪರೀಕ್ಷಾತಪಾಸಣೆ ನಡೆಸಿದ ನಂತರ ಎಲ್ಲಾ ಅಭ್ಯರ್ಥಿಗಳ ಗುರುತಿನದಾಖಲೆ/ಚೀಟಿ ಮತ್ತು ಪ್ರವೇಶ ಪತ್ರವನ್ನುಕಡ್ಡಾಯವಾಗಿ ಪರಿಶೀಲಿಸಿ ಅವರುಗಳ ಅಭ್ಯರ್ಥಿತ್ವದ ಬಗ್ಗೆ ಖಚಿತಪಡಿಸಿಕೊಂಡ ನಂತರವೇ ಪರೀಕ್ಷಾ ಉಪ ಕೇಂದ್ರದ ಒಳಗೆ ಪ್ರವೇಶಿಸಲು ಅನುಮತಿಸತಕ್ಕದ್ದು.

ಆನಂತರ ಅಭ್ಯರ್ಥಿಗಳಿಗೆ ನೇರವಾಗಿ ಅವರುಗಳಿಗೆ ಹಂಚಿಕೆ ಮಾಡಲಾದ ನಿಗದಿತ ಪರೀಕ್ಷಾ ಕೊಠಡಿಯ ಬಳಿ ತೆರಳುವಂತೆ ಸೂಚಿಸತಕ್ಕದ್ದು. ಪರೀಕ್ಷಾಕೊಠಡಿಯ ಪ್ರವೇಶದ್ವಾರದ ಬಳಿ ಅಭ್ಯರ್ಥಿಯನ್ನು ಮತ್ತೊಮ್ಮೆ ಸೂಕ್ಷ್ಮವಾಗಿತಪಾಸಣೆಗೆ ಒಳಪಡಿಸುವುದು.

ಈ ಮೇಲ್ಕಂಡ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸಬೇಕೆಂದು ಜಿಲ್ಲಾಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

ಧಾರ್ಮಿಕಆಚರಣೆಗೆ ಸಂಬಂಧಿಸಿದ ವಸ್ತುಗಳನ್ನು ಧರಿಸಿ ಬರುವಅಭ್ಯರ್ಥಿಗಳು ಮತ್ತು ಹಿಯರಿಂಗ್ ಏಡ್ ಉಪಕರಣ ಧರಿಸಿರುವ ಅಭ್ಯರ್ಥಿಗಳು ಪರೀಕ್ಷೆ ಪ್ರಾರಂಭವಾಗುವ 2 ಗಂಟೆ ಮುಂಚಿತವಾಗಿ ಸಂಪೂರ್ಣ ವಿಶೇಷ ತಪಾಸಣೆಗೆ ಒಳಪಡಬೇಕಾಗಿರುತ್ತದೆ. ಹಿಯರಿಂಗ್ ಏಡ್ ಉಪಕರಣ ಧರಿಸಿರುವ ಅಭ್ಯರ್ಥಿಗಳು ವೈದ್ಯಕೀಯ ದಾಖಲೆಗಳನ್ನು ಕಡ್ಡಾಯವಾಗಿ ಹಾಜರುಪಡಿಸುವುದು.

## ರಾಜು ಭೂಶೆಟ್ಟಿಯವರ ಚಿಂತನ ನಾಳೆ



■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವಿಜ್ಞಾನ ಸಂವಹನಕಾರರಾದ ರಾಜು ಭೂಶೆಟ್ಟಿಯವರ ಆತ್ಮ ವಿಶ್ವಾಸ, ಸೃಜನಶೀಲತೆ ವಿಷಯಗಳನ್ನಾಧರಿಸಿದ ಚಿಂತನ ಕಾರ್ಯಕ್ರಮವು ಧಾರವಾಡ ಆಕಾಶವಾಣಿಯ ಮೂಲಕ ಸೆ.14ರಂದು ಬೆಳಿಗ್ಗೆ 6.25ಕ್ಕೆ ಪ್ರಸಾರವಾಗಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಿರುದ್ಧ ಬಿಜೆಪಿ ಪ್ರತಿಭಟನೆ




■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ವಿದೇಶದಲ್ಲಿ ರಾಹುಲ್ ಗಾಂಧಿ ನೀಡಿದ ದಲಿತ ವಿರೋಧಿ ಹೇಳಿಕೆ ಖಂಡಿಸಿ ನಗರದ ಬಸವೇಶ್ವರ ವೃತ್ತದಲ್ಲಿ ಗುರುವಾರ ಬಿಜೆಪಿ ಜಿಲ್ಲಾ ಘಟಕದ ನೇತೃತ್ವದಲ್ಲಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ಟೈರ್ ಗೆ ಬೆಂಕಿ ಹಚ್ಚಿ ರಾಹುಲ್ ಗಾಂಧಿ ಭಾವಚಿತ್ರಕ್ಕೆ ಚಪ್ಪಲಿಯಿಂದ ಹೊಡೆದು, ಬಳಿಕ ದಹಿಸಿ ಆಕ್ರೋಶ ವ್ಯಕ್ತಪಡಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ನವೀನ್ ಗುಳಗಣ್ಣನವರ, ಎಂಎಲ್ಸಿ ಹೇಮಲತಾ ನಾಯಕ್, ಮಾಜಿ ಶಾಸಕ ಬಸವರಾಜ ದಡೇಸಗೂರು, ರಾಜ್ಯ ಕಾರ್ಯಕಾರಣಿ ಸದಸ್ಯ ಡಾ.ಬಸವರಾಜ ಕ್ಯಾವಟರ್, ಪ್ರದೀಪ್ ಹಿಟ್ನಾಳ್, ಎಸ್ಸಿ ಮೋರ್ಚಾ ಜಿಲ್ಲಾಧ್ಯಕ್ಷ ಗಣೇಶ ಹೊರತಟ್ನಾಳ್, ಪ್ರಾಣೇಶ ಮಾದಿನೂರು, ವೀರಣ್ಣ ಸಜ್ಜನ್, ಅಜ್ಜಯ್ಯ ಪಾಟೀಲ್, ಕೀರ್ತಿ ಪಾಟೀಲ್, ಶೋಭಾ ನಗರಿ ಇದ್ದರು.

# ‘ಉತ್ತಮ ಶಿಕ್ಷಕ’ ಪ್ರಶಸ್ತಿ ಪ್ರದಾನ ಸಮಾರಂಭ



■ವಿಜಯಸಾಕ್ಷಿ ಸುದ್ದಿ, ಗದಗ

ಕಪ್ಪತ್ತಗಿರಿ ಫೌಂಡೇಶನ್ ಸಾಹಿತ್ಯ ಮತ್ತು ಸಾಂಸ್ಕೃತಿಕ ಕಲಾ ವೇದಿಕೆಯ ಗದಗ ಜಿಲ್ಲಾ ವತಿಯಿಂದ ಜಿಲ್ಲಾ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಸಮಾರಂಭ ಹಾಗೂ ಮಹಾಂತೇಶ ಬೇರಗಣ್ಣವರ ಅವರ ಕೃತಿ ಲೋಕರ್ಪಣೆ ಕಾರ್ಯಕ್ರಮ ಇತ್ತೀಚೆಗೆ ಜರುಗಿತು.

ಮಹಾಂತೇಶ ಬೇರಗಣ್ಣವರ ಪ್ರಾಸ್ತಾವಿಕವಾಗಿ ಮಾತನಾಡಿ, ಕಪ್ಪತ್ತಗಿರಿ ಸಂಸ್ಥೆಯು ಸಾಗಿ ಬಂದ ಹಾದಿ ಮತ್ತು ಗುರಿ ಧ್ಯೇಯೋದ್ದೇಶಗಳನ್ನು ತಿಳಿಸುತ್ತ, ಸ್ಥಾಪನೆಯಾದ ಕೆಲವೇ ವರ್ಷಗಳಲ್ಲಿ ಹಲವಾರು ಸಾಮಾಜಿಕ ಕಾರ್ಯಕ್ರಮಗಳನ್ನು ಮಾಡುವುದರ ಮೂಲಕ ಹಲವಾರು ಕವಿ-ಕಲಾವಿದರನ್ನು ಗುರುತಿಸಿ ಗೌರವಿಸಿ ಮುಖ್ಯ ವಾಹಿನಿಗೆ ಪರಿಚಯಿಸಿದೆ ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ರಮೇಶ ಸಿದ್ದಪ್ಪ ನಾಯಕ ಮಾತನಾಡಿ, ಕಪ್ಪತ್ತಗಿರಿ ಫೌಂಡೇಶನ್ ಮೂಲಕ ಮಹಿಳೆಯೊಬ್ಬರು ಹಲವಾರು ಕಾರ್ಯಕ್ರಮಗಳನ್ನು ಆಯೋಜಿಸಿ ಇಷ್ಟೆಲ್ಲಾ ಕಾರ್ಯಚಟುವಟಿಕೆ ಮಾಡುತ್ತಾರೆಂದರೆ ನಾವೆಲ್ಲರೂ ಅವರಿಗೆ ಕೈ ಜೋಡಿಸಬೇಕು ಎಂದು ಹೇಳಿದರು.

ಉಪನ್ಯಾಸಕರಾಗಿ ಆಗಮಿಸಿದ ಕೆ.ಎ. ಬಳಿಗೇರ ಇಕ್ಕಟ್ಟಿನ ಪರಿಸ್ಥಿತಿಯಲ್ಲಿ ಇರುವ ಶಿಕ್ಷಕರ ಸವಾಲಿನ ಬಗ್ಗೆ ಮಾತನಾಡಿದರು.

ಮಹಾಂತೇಶ ಬೇರಗಣ್ಣವರ ಅವರ ‘ಹೇಳ್ದವ್ರ ಮಾತು ಯಾರ್ ಕೇಳ್ತಾರೀಗ’ ಪುಸ್ತಕ ಲೋಕಾರ್ಪಣೆಗೊಳಿಸಲಾಯಿತು. ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ, ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಚಂದ್ರಶೇಖರ ವಸ್ತ್ರದ, ಅಶ್ವಿನಿ ಬಾದಾಮಿ, ಅಧ್ಯಕ್ಷತೆ ವಹಿಸಿದ್ದ ಚಂದ್ರಕಲಾ ಎಂ. ಇಟಗಿಮಠ ಮಾತನಾಡಿದರು.

ಓಂಕಾರ ಗಿರಿಯ ಪಟ್ಟಾಧ್ಯಕ್ಷರಾದ ಶ್ರೀ ನಿ.ಪ್ರ. ಪಕ್ಕಿರೇಶ್ವರ ಶ್ರೀಗಳು ಸಾನ್ನಿಧ್ಯ ವಹಿಸಿ ಶುಭ ಹಾರೈಸಿದರು. ಸೌಮ್ಯ ಹಿರೇಮಠ ಸ್ವಾಗತಿಸಿದರು. ಕವಿತಾ ಗುಜಮಾಗಡಿ ಪ್ರಾರ್ಥಿಸಿದರು. ಪುಸ್ತಕ ಬಿಡುಗಡೆಯನ್ನು ಬಾಳವ್ವ ಧರ್ಮಟ್ಟಿ ಮಾಡಿದರು. ಈಶ್ವರ ಕುರಿ ಕಾರ್ಯಕ್ರಮ ನಿರ್ವಹಿಸಿದರು. ನಾಗರತ್ನ ಹೊಸಮನಿ, ತೋಟಯ್ಯ ಗುಡ್ಡಿಮಠ, ಸ್ವಪ್ನಾ ಹಿರೇಮಠ, ರಾಜೇಶ್ವರಿ ಗುಡ್ಡಿಮಠ ನಿರ್ವಹಿಸಿದರು. ಶಿವಲೀಲಾ ಧನ್ನಾ ವಂದಿಸಿದರು.



ಕರ್ನಾಟಕ ರಾಜ್ಯ ಅನುಮತಿ ಪಡೆದ ವಿದ್ಯುತ್ ಗುತ್ತಿಗೆದಾರರ ಸಂಘ ಗದಗ ಜಿಲ್ಲಾ ಸಮಿತಿ ಸ್ಥಾಪನೆಗೊಂಡು 25 ವರ್ಷಗಳು ತುಂಬಿದ ಹಿನ್ನೆಲೆಯಲ್ಲಿ ‘ಬೆಳ್ಳಿ ಮಹೋತ್ಸವ’ ಆಚರಣೆ ಮತ್ತು 2024ನೇ ಸಾಲಿನ 20ನೇ ವರ್ಷದ ಗಜಾನನೋತ್ಸವ ಕಾರ್ಯಕ್ರಮವನ್ನು 5 ದಿನಗಳ ಕಾಲ ಆಚರಿಸಲಾಯಿತು. ಈ ಸಂದರ್ಭದಲ್ಲಿ ಸಂಘದ ಗದಗ ಜಿಲ್ಲಾ ಸಮಿತಿ ಅಧ್ಯಕ್ಷ ಮಲ್ಲಪ್ಪ ಎಸ್.ಕಿಂದ್ರಿ, ಶಿವಾನಂದ ಪಾಟೀಲ, ಪ್ರವೀಣ ಗ್ಯಾನಪ್ಪನವರ, ಕುಮಾರಗೌಡ ಪಾಟೀಲ, ನಾರಾಯಣ ಶಿವರಡ್ಡಿ, ಪ್ರಭು ದೇಸಾಯಿಮಠ ಸೇರಿದಂತೆ ಸಂಘದ ಗದಗ ಜಿಲ್ಲಾ ಸಮಿತಿಯ ಎಲ್ಲ ಪದಾಧಿಕಾರಿಗಳು ಮತ್ತು ವಿದ್ಯುತ್ ಗುತ್ತಿಗೆದಾರರು ಉಪಸ್ಥಿತರಿದ್ದರು.

## ಕಡೆನಂದಿಹಳ್ಳಿ ವೀರಭದ್ರ ಶಿವಾಚಾರ್ಯರ ಅಗಲಿಕೆ ಶ್ರೀ ರಂಭಾಪುರಿ ಜಗದ್ಗುರುಗಳ ಸಂತಾಪ

■ವಿಜಯಸಾಕ್ಷಿ ಸುದ್ದಿ, ಕಡೆನಂದಿಹಳ್ಳಿ

ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ಮಹಾಪೀಠದ ಶಾಖಾ ಮಠವಾಗಿದ್ದ ಕಡೆನಂದಿಹಳ್ಳಿ ಹೋಳಿ ಹಂಪೇಶ್ವರ ಮಠದ ವೀರಭದ್ರ ಶಿವಾಚಾರ್ಯ ಸ್ವಾಮಿಗಳ ಅಗಲಿಕೆಗೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಸಂತಾಪ ವ್ಯಕ್ತಪಡಿಸಿದ್ದಾರೆ. ಧರ್ಮ ಸಂಸ್ಕೃತಿ ಪಸರಿಸುವಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ಪಾರಂಪರಿಕ ಆಯುರ್ವೇದದ ಮೂಲಕ ಆ ಭಾಗದ ಬಡ ರೋಗಿಗಳಿಗೆ ಚಿಕಿತ್ಸೆ ನೀಡುತ್ತಿದ್ದರು. ಶ್ರೀಗಳು ಧಾರ್ಮಿಕ ಶೈಕ್ಷಣಿಕ ಸಾಮಾಜಿಕ ಕ್ಷೇತ್ರಗಳಲ್ಲಿಯೂ ಸೇವೆ ಸಲ್ಲಿಸಿದವರಾಗಿದ್ದರು. ವೀರಭದ್ರ ಶಿವಾಚಾರ್ಯ ಸ್ವಾಮಿಗಳ ಅಗಲಿಕೆ ನೋವಿನ ಸಂಗತಿಯಾಗಿದ್ದು, ದಯಾಘನನಾದ ಪರಮಾತ್ಮನು ಶ್ರೀಗಳ ಪವಿತ್ರ ಆತ್ಮಕ್ಕೆ ಚಿರಶಾಂತಿಯನ್ನು ನೀಡಲಿ ಎಂದು ಸಂದೇಶದಲ್ಲಿ ತಿಳಿಸಿದ್ದಾರೆ.

ಪೋಷಣ ಮಾಸಾಚರಣೆ ಕಾರ್ಯಕ್ರಮಕ್ಕೆ ಚಾಲನೆ

## ಅಂಗನವಾಡಿಗಳಲ್ಲಿ ಗುಣಮಟ್ಟದ ಸೇವೆ



■ವಿಜಯಸಾಕ್ಷಿ ಸುದ್ದಿ, ಗದಗ

ಅಂಗನವಾಡಿ ಕೇಂದ್ರಗಳಲ್ಲಿ ಗುಣಮಟ್ಟದ ಸೇವೆಗಳನ್ನು ಒದಗಿಸಲಾಗುತ್ತಿದ್ದು, ತಾಯಂದಿರು ಇವುಗಳ ಸದುಪಯೋಗ ಪಡೆದುಕೊಳ್ಳಬೇಕೆಂದು ಚಿಂತಕಿ ಕವಿತಾ ದಂಡಿನ ಹೇಳಿದರು.

ಬುಧವಾರ ಗದಗ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಶು ಅಭಿವೃದ್ಧಿ ಯೋಜನೆಯಿಂದ ಗದಗ ರಾಜೀವ ಗಾಂಧಿ ನಗರದ ಅಂಗನವಾಡಿ 324ರಲ್ಲಿ ಜರುಗಿದ ಪೋಷಣ ಮಾಸಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಅತಿಥಿಗಳಾಗಿ ಆಗಮಿಸಿದ್ದ ಗದಗ ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮಂಜುಳಾ ಕಮತ ಮಾತನಾಡಿ, ಪೌಷ್ಠಿಕ ಆಹಾರ ಸೇವನೆಯಿಂದ ಗರ್ಭಿಣಿ ಮಹಿಳೆಯರು ಆರೋಗ್ಯದಿಂದ ಇರುತ್ತಾರೆ. ಸತ್ವಯುತ ಆಹಾರ ಸೇವನೆ, ಸರಿಯಾದ ನಿದ್ರೆ, ಮಿತವಾದ ವ್ಯಾಯಾಮಗಳಿಂದ ಆರೋಗ್ಯ ಸದೃಢತೆ ಹೊಂದಬೇಕು ಎಂದರು.

ವಲಯ ಮೇಲ್ವಿಚಾರಕಿ ವಿಜಯಲಕ್ಷ್ಮೀ ಗುರುಬಸನಗೌಡ್ರ ಮಾತನಾಡಿ, ಹದಿಹರೆಯದವರ ಸಮಸ್ಯೆಗಳನ್ನು ಆ ಮಕ್ಕಳಿಂದ ಕೇಳಿ ತಿಳಿದು ಅವುಗಳಿಗೆ ಸೂಕ್ತ ಪರಿಹಾರ ತಿಳಿಸಬೇಕು ಎಂದರು.

ಪೋಷಣ ಅಭಿಯಾನದ ಗದಗ ತಾಲೂಕ ಸಂಯೋಜಕಿ ಕಾವೇರಿ ಚೇಗೂರ ಪ್ರಾಸ್ತಾವಿಕವಾಗಿ ಮಾತನಾಡಿದರು. ಗರ್ಭಿಣಿ ಮಹಿಳೆಯರಾದ ಕಲ್ಪನಾ ಪಸಲಾದಿ ಹಾಗೂ ತಸ್ಲಿಂ ಮುಲ್ಲಾ ಅವರ ಸೀಮಂತ ಕಾರ್ಯಕ್ರಮ ನಡೆಸಲಾಯಿತು. ಸಹನಾ ಜೋಶಿ ಹಾಗೂ ಮಂಜುಳಾ ಹೂಗಾರ ಪ್ರಾರ್ಥಿಸಿದರು. ಅಂಗನವಾಡಿ ಕಾರ್ಯಕರ್ತೆ ಸಾವಿತ್ರಿ ಪಿಳ್ಳೆ ಸ್ವಾಗತಿಸಿದರು. ಶಕುಂತಲಾ ಪೂಜಾರ ನಿರೂಪಿಸಿದರು. ರತ್ನಾ ವಜ್ರೇಶ್ವರಿ ವಂದಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯೋಪಾಧ್ಯಾಯೆ ಕೆ.ಎ. ದಾವಲಖಾನ, ಬಾಲವಿಕಾಸ ಕಮಿಟಿಯ ಸುನೀಲ ಚಳಗೇರಿ, ದ್ರಾಕ್ಷಾಯಣಿ ಪನ್ನೂರ, ಮಾಲಾ ಪೆನಗೊಂಡ್ಲ, ಭಾಗ್ಯಾ ಮಂಟೂರ, ಜಯಲಕ್ಷ್ಮೀ ತಾಮ್ರಗುಂಡಿ, ಶಕೀಲ ವಾಲೇಕಾರ ಹಾಗೂ ಸರ್ಕಾರಿ ಉರ್ದು ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರು ಉಪಸ್ಥಿತರಿದ್ದರು.

ದಶಲಕ್ಷಣ ಪರ್ವಾಚರಣೆ, ಸಮಾಜ ಸಂಪರ್ಕ ಸಭೆ ಮಾಲಿಕೆಗೆ ಚಾಲನೆ

# ಎಲ್ಲರಲ್ಲೂ ಸಂಯಮ; ತ್ಯಾಗ ಗುಣ ಬರಬೇಕು

■ವಿಜಯಸಾಕ್ಷಿ ಸುದ್ದಿ, ಗದಗ

ಜೈನ್ ಧರ್ಮ-ಪರಂಪರೆ ಹಿರಿದಾದದ್ದು. ಅಹಿಂಸಾವಾದಿಗಳಾದ ಜೈನರು ಅಹಿಂಸೆಯಿಂದಲೇ ಧರ್ಮಪಾಲನೆ ಹಾಗೂ ಸಾಧನೆ ಮಾಡುವರು ಎಂದು ಜೈನ್ ಧರ್ಮದ ಹಿರಿಯ ಶ್ರಾವಕರಾದ ಆನಂದ ಬಸ್ತಿ ಹೇಳಿದರು.

ಅವರು ಗದುಗಿನ ಪ್ರಕಾಶ ಮುತ್ತಿನ ಅವರ ಕಟ್ಟಡದಲ್ಲಿರುವ ಗದಗ ಜಿಲ್ಲಾ ದಿಗಂಬರ ಜೈನ ಸಂಘದ ಕಾರ್ಯಾಲಯದಲ್ಲಿ ಸಂಘದಿಂದ ಏರ್ಪಡಿಸಿದ್ದ ದಶಲಕ್ಷಣ ಪರ್ವಾಚರಣೆ ಮತ್ತು ಸಮಾಜ ಸಂಪರ್ಕ ಸಭೆ ಮಾಲಿಕೆಯನ್ನು ಉದ್ಘಾಟಿಸಿ ಮಾತನಾಡಿದರು.

ಜೈನ್ ಧರ್ಮಿಯರೂ ಸೇರಿದಂತೆ ಪ್ರತಿಯೊಬ್ಬರಲ್ಲೂ ಸಂಯಮ ಗುಣ ಬರಬೇಕು. ತ್ಯಾಗ ಗುಣವನ್ನು ಹೊಂದಬೇಕು. ಆಗಿರುವ ತಪ್ಪನ್ನು ಅರಿತು ಕ್ಷಮೆ ಯಾಚಿಸುವುದೇ ಧರ್ಮ. ಸಾಮೂಹಿಕ ಕ್ಷಮಾವಳಿ ಆಚರಿಸುವ ಮೂಲಕ ಎಲ್ಲರಲ್ಲಿ ಸದ್ಭಾವನೆ ಮೂಡಿಸುವುದೇ ಈ ದಶಲಕ್ಷಣ ಪರ್ವದ ತಿರುಳಾಗಿದೆ ಎಂದರು.




ಅಧ್ಯಕ್ಷತೆ ವಹಿಸಿ ಮಾತನಾಡಿದ ಸಂಘದ ಅಧ್ಯಕ್ಷ ಪಿ.ಎ. ಕುಲಕರ್ಣಿ, ಶಾಸ್ತ್ರಗಳನ್ನು ಓದುವ್ಯದರಿಂದ ಮನ ಪರಿವರ್ತನೆ ಆಗುತ್ತದೆ ಮತ್ತು ಗುರುಗಳ ಸೇವೆಯನ್ನು ಸದಾ ಮಾಡಬೇಕು ಎಂದರು.

ವೇದಿಕೆಯ ಮೇಲೆ ಲೋಹಿತ್ ಕಾಸಾರ, ವಿದ್ಯಾಧರ ಢಾಕಪ್ಪನವರ ಉಪಸ್ಥಿತರಿದ್ದರು. ಸಮಾರಂಭದಲ್ಲಿ ಎಂ.ಟಿ. ಕಬ್ಬಿಣ, ಸಂತೋಷ ಕುಲಕರ್ಣಿ, ಆಕಾಶ ಮುತ್ತಿನ, ಶೋಭಾ ಇಂಚಲ, ತುಕೋಳ, ಸುಮನ್ ಮುತ್ತಿನ, ಸುಕನ್ಯಾ ಸೇರಿದಂತೆ ಸಮಾಜಬಾಂಧವರು ಪಾಲ್ಗೊಂಡಿದ್ದರು.

ಉಪನ್ಯಾಸಕರಾಗಿ ಆಗಮಿಸಿದ್ದ ಡಾ.ಅಪ್ಪಣ್ಣ ಹಂಜೆ ಮಾತನಾಡಿ, ಕ್ಷಮಾ, ಮಾರ್ದವ, ಅರ್ಜವ, ಶೌಚ, ಸತ್ಯ, ಸಂಯಮ, ತಪ, ತ್ಯಾಗ, ಅಕಿಂಚನ್ಯ, ಬ್ರಹ್ಮಚರ್ಯ ಹೀಗೆ ಒಟ್ಟು ದಶಲಕ್ಷಣಗಳಿಂದ ಕೂಡಿದ ಈ ಪರ್ವಾಚರಣೆಯನ್ನು ಪ್ರತಿ ವರ್ಷ ಆಚರಿಸುವ ಮೂಲಕ ವೈಯುಕ್ತಿಕ, ಸಾಮಾಜಿಕ, ಧಾರ್ಮಿಕವಾಗಿ ಜಾಗೃತಿ ಹೊಂದುವದಾಗಿದೆ ಎಂದರು.

ಸಾಮೂಹಿಕ ಪ್ರಾರ್ಥನೆ ಜರುಗಿತು. ಇತ್ತೀಚೆಗೆ ಅಗಲಿದ ವಿಜಯಕುಮಾರ ಕಬ್ಬಿಣ, ಸುಮಿತ್ರಾ ದೇಸಾಯಿ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಸಂಘದ ಕಾರ್ಯದರ್ಶಿ ಪ್ರಕಾಶ ಮುತ್ತಿನ ನಿರೂಪಿಸಿದರು. ನಾಗರಾಜ ತುಕೋಳ ವಂದಿಸಿದರು.

ಜಿ. ಪಂ ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ಜವಾಬ್ದರಿಯಿಂದ ಉತ್ತರಿಸಲು ಸಚಿವ ಸಂತೋಷ ಲಾಡ್ ನಿರ್ದೇಶನ

# ರೈತರ ಬಗ್ಗೆ ಕಳಕಳಿ ಇರಲಿ, ಜವಾಬ್ದಾರಿಯಿಂದ ವರ್ತಿಸಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕೆಡಿಪಿ ಸಭೆಯು ಜಿಲ್ಲೆಯಲ್ಲಿ ಅನುಷ್ಠಾನದಲ್ಲಿರುವ ಅಭಿವೃದ್ಧಿ ಯೋಜನೆಗಳ ಪ್ರಗತಿ ಪರಿಶೀಲನೆ ಮತ್ತು ಜಿಲ್ಲೆಯ ಸಮಸ್ಯೆಗಳ ಬಗ್ಗೆ ಆದ್ಯತೆಯ ಮೇಲೆ ಚರ್ಚೆ ಆಗಬೇಕು. ಅಧಿಕಾರಿಗಳು ಸಭೆಗೆ ಅಪೂರ್ಣ ಮಾಹಿತಿ ತಂದರೆ, ಸಭೆಯ ಉದ್ದೇಶ ಈಡೆರುವುದಿಲ್ಲ. ರೈತರ ಬಗ್ಗೆ, ಬಡವರ ಬಗ್ಗೆ ಕಳಕಳಿ ಇರಬೇಕು. ಅಧಿಕಾರಿಗಳು ಜವಾಬ್ದರಿಯಿಂದ ಸಭೆಗೆ ಸರಿಯಾದ ಮಾಹಿತಿ ಮತ್ತು ಉತ್ತರ ನೀಡಬೇಕೆಂದು ಸಚಿವ ಸಂತೋಷ ಲಾಡ್ ಅವರು ಎಚ್ಚರಿಕೆ ನೀಡಿದರು.



ಅವರು ಗುರುವಾರ ಬೆಳಿಗ್ಗೆ ಧಾರವಾಡ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ 2024–25ನೇ ಸಾಲಿನ ಜೂನ್ ಅಂತ್ಯಕ್ಕೆ ಕೊನೆಗೊಂಡ 1ನೇ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕೃಷಿ, ಮಾರುಕಟ್ಟೆ, ತೋಟಗಾರಿಕೆ, ರೇಷ್ಮೆ, ಪಶುಪಾಲನೆ, ನೀರಾವರಿ ಇಲಾಖೆಗಳ ಅಧಿಕಾರಿಗಳು ಕೆಡಿಪಿ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಬರಬೇಕು. ವಾಸ್ತವಿಕ ವರದಿ ನೀಡುವದರಿಂದ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಸಹಾಯವಾಗುತ್ತದೆ ಎಂದು ಸಚಿವರು ತಿಳಿಸಿದರು.

ಜಿಲ್ಲೆಯಲ್ಲಿ ಎಲ್ & ಟಿ ಕಂಪನಿಯಿಂದ ಜಲ ಜೀವನ ಮಿಷನ್ ಯೋಜನೆ ತೃಪ್ತಿಕರವಾಗಿ ಅನುಷ್ಠಾನಗೊಳ್ಳುತ್ತಿಲ್ಲ. ನಿಗದಿತ ಅವಧಿಯಲ್ಲಿ ಯೋಜನೆ ಮುಗಿಸದಿದ್ದರೆ ಮತ್ತು ಪ್ರತಿ ಹಂತದ ಕಾಮಗಾರಿಯನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸದಿದ್ದರೆ ಕಂಪನಿ ವಿರುದ್ಧ ಎಫ್‌ಐಆರ್ ದಾಖಲಿಸಲಾಗುತ್ತದೆ ಎಂದು ಸಚಿವರು ಎಚ್ಚರಿಸಿದರು.

ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ ಅಂತ್ರೊಳ್ಳಿ ಮಾತನಾಡಿ, ಹೆಸರು, ಗೋವಿನ ಜೋಳ, ಉದ್ದು ಸೇರಿ ವಿವಿಧ ಬೆಳೆಗಳ ಕಟಾವು ನಡೆದಿದೆ. ಹಿಂಗಾರಿಗೆ ಅಗತ್ಯ ಬೀಜ, ರಸಗೊಬ್ಬರ ದಾಸ್ತಾನು ಇದೆ ಎಂದು ಸಭೆಗೆ ತಿಳಿಸಿದರು.

ಉಪ ನಿರ್ದೇಶಕ ಡಾ. ರವಿ ಸಾಲಿಗೌಡರ ಮಾತನಾಡಿ, ಇಲಾಖೆ ಯೋಜನೆಗಳು ಪ್ರಗತಿಯಲ್ಲಿವೆ. ಪಶುಪಾಲನೆಯ ಹೆಚ್ಚಳಕ್ಕೆ ಅಗತ್ಯ ಜನಜಾಗೃತಿ ಮೂಡಿಸಲಾಗುತ್ತದೆ ಎಂದು ಹೇಳಿದರು.

ಆಲ ಜೀವನ್ ಮಿಷನ್ ಯೋಜನೆಯಡಿ ಜಿಲ್ಲೆಯ 249 ಗ್ರಾಮಗಳಲ್ಲಿ ನೀರು ಸರಬರಾಜು ವ್ಯವಸ್ಥೆಯನ್ನು ಆಯಾ ಗ್ರಾಮ ಪಂಚಾಯಿತಿಗಳಿಗೆ ವಹಿಸಲಾಗಿದೆ. ಉಳಿದ ಗ್ರಾ.ಪಂ ನೀರು ಸರಬರಾಜು ವ್ಯವಸ್ಥೆ ವಹಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ ಎಂದು ಇಂಜಿನಿಯರ್ ಜಗದೀಶ ತಿಳಿಸಿದರು.

ರಾಜ್ಯ ಸರಕಾರವು ಜಿಲ್ಲೆಗೆ 8 ಅಲ್ಪಸಂಖ್ಯಾತರ ಹಾಗೂ 14 ಹಿಂದುಳಿದ ವರ್ಗಗಳ ವಸತಿ ನಿಲಯಗಳನ್ನು ಮಂಜೂರಿ ಮಾಡಿದ್ದು, ಶೀಘ್ರವೇ ವಸತಿ ನಿಲಯಗಳ ಆರಂಭಕ್ಕೆ ಕ್ರಮ ವಹಿಸುವಂತೆ ಸಚಿವರು ತಿಳಿಸಿದರು.

ಬೆಂಬಲ ಬೆಲೆ ಯೋಜನೆಯಡಿ ಹೆಸರು ಖರೀದಿ ಕೇಂದ್ರದಲ್ಲಿ ರೈತರ ನೋಂದಣಿ ಆರಂಭವಾಗಿದ್ದು, ಸುಮಾರು 3 ಸಾವಿರ ರೈತರು ತಮ್ಮ ಹೆಸರು ನೋಂದಾಯಿಸಿದ್ದಾರೆ. ನೋಂದಣಿ ಪ್ರಗತಿಯಲ್ಲಿದೆ. ಹವಾಮಾನ ವೈಪರಿತ್ಯದಿಂದಾಗಿ ಹೆಸರುಕಾಳುಗಳಲ್ಲಿ ತೇವಾಂಶ ಇದೆ. ಗ್ರೇಡಿಂಗ್ ಬಂದ ತಕ್ಷಣ ಖರೀದಿ ಆರಂಭಿಸಲಾಗುತ್ತದೆ ಎಂದು ಕೃಷಿ ಮಾರುಕಟ್ಟೆ ಇಲಾಖೆ ಉಪ ನಿರ್ದೇಶಕ ಲಮಾಣಿ ತಿಳಿಸಿದರು.

ಜಿಲ್ಲಾಧಿಕಾರಿ ದಿವ್ಯ ಪ್ರಭು ಮಾತನಾಡಿ, ಜಿಲ್ಲೆಯಲ್ಲಿ ಒತ್ತುವರಿಯಾಗಿರುವ ಸರಕಾರಿ ಜಮೀನುಗಳನ್ನು ಗುರುತಿಸಿ ಅವುಗಳ ಸಮೀಕ್ಷೆ ಕಾರ್ಯ ಪ್ರಗತಿಯಲ್ಲಿದೆ. ಕೆರೆ, ಗೋಮಾಳ ಅತಿಕ್ರಮಣ ಆಗದಂತೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಭೆಗೆ ತಿಳಿಸಿದರು.

ಸಭೆಯಲ್ಲಿ ವಿವಿಧ ವಿಷಯಗಳ ಕುರಿತು ಶಾಸಕರಾದ ಎನ್.ಎಚ್. ಕೋನರಡ್ಡಿ, ಎಂ.ಆರ್. ಪಾಟೀಲ ಮಾತನಾಡಿದರು. ಹುಬ್ಬಳ್ಳಿ–ಧಾರವಾಡ ಮಹಾನಗರ ಪೊಲೀಸ್ ಆಯುಕ್ತ ಎನ್.ಶಶಿಕುಮಾರ, ಗ್ಯಾರಂಟಿ ಯೋಜನಾ ಪ್ರಾಧಿಕಾರದ ಬೆಳಗಾವಿ ವಿಭಾಗದ ಅಧ್ಯಕ್ಷ ಎಸ್.ಆರ್. ಪಾಟೀಲ, ಮಹಾನಗರ ಪಾಲಿಕೆ ಆಯುಕ್ತ ಡಾ. ಈಶ್ವರ ಉಳ್ಳಾಗಡ್ಡಿ ವೇದಿಕೆಯಲ್ಲಿ ಇದ್ದರು.

ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲ ಅಭಿಯಂತರ ಆರ್.ಎಂ. ಸೊಪ್ಪಿಮಠ, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಂತರ ಪ್ರಶಾಂತ ಪಾಟೀಲ, ಜಿ.ಪಂ ಕೆಡಿಪಿ ಸಭೆಯ ನಾಮನಿರ್ದೇಶಿತ ಸದಸ್ಯರು, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

## ಶಿಕ್ಷಣ ಕ್ಷೇತ್ರದಲ್ಲಿ ರಡ್ಡೇರರ ಸೇವೆ ಶ್ಲಾಘನೀಯ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಫಲಿತಾಂಶವನ್ನು ಸುಧಾರಿಸುವಲ್ಲಿ ವಿನೂತನ ಯೋಜನೆಗಳನ್ನು ಜಾರಿಗೆ ತಂದು ಶಿಕ್ಷಣ ಗುಣಮಟ್ಟವನ್ನು ಹೆಚ್ಚಿಸುವ ಮೂಲಕ ರಾಜ್ಯದಲ್ಲಿ 27ನೇ ಸ್ಥಾನದಲ್ಲಿದ್ದ ಗದಗ ಜಿಲ್ಲೆಯನ್ನು 17ನೇ ಸ್ಥಾನಕ್ಕೆ ತಂದ ಕೀರ್ತಿ ನಿವೃತ್ತ ಉಪನಿರ್ದೇಶಕ ಎಮ್.ಎ. ಡಡ್ಡೇರ ಅವರಿಗೆ ಸಲ್ಲುತ್ತದೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

ಇತ್ತೀಚೆಗೆ ಗದಗ ನಗರದ ನಿರೀಕ್ಷಣಾ ಮಂದಿರದಲ್ಲಿ ಗದಗ ಜಿಲ್ಲೆಯ ವಿವಿಧ ಶಿಕ್ಷಕ ಸಂಘಟನೆಯವರು ಏರ್ಪಡಿಸಿದ್ದ ಸನ್ಮಾನ ಸಮಾರಂಭದಲ್ಲಿ ಮಾತನಾಡಿ, ಎಮ್.ಎ. ರಡ್ಡೇರ ಅವರು ಪ್ರಾಥಮಿಕ ಶಾಲಾ ಶಿಕ್ಷಕರಾಗಿ, ಪ್ರೌಢಶಾಲಾ ಮುಖ್ಯೋಪಾಧ್ಯಾಯರಾಗಿ, ವಿಷಯ ಪರಿವೀಕ್ಷಕರಾಗಿ, ಕ್ಷೇತ್ರ ಶಿಕ್ಷಣಾಧಿಕಾರಿಗಳಾಗಿ ಹಾಗೂ ಉಪನಿರ್ದೇಶಕರಾಗಿ ಶಿಕ್ಷಣ ಕ್ಷೇತ್ರಕ್ಕೆ ಸಲ್ಲಿಸಿದ ಸೇವೆ ಅವಿಸ್ಮರಣೀಯ ಎಂದರು.

ಈ ಸಂದರ್ಭದಲ್ಲಿ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಬಿ.ಎಫ್. ಪೂಜಾರ, ಮಾಧ್ಯಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಎಮ್.ಕೆ. ಲಮಾಣಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ವಿ.ಎಮ್. ಹಿರೇಮಠ, ಪದವಿಪೂರ್ವ ನೌಕರರ ಸಂಘದ ಜಿಲ್ಲಾಧ್ಯಕ್ಷ ಪವಾಡಿಗೌಡ್ರ ಮುಂತಾದವರು ಮಾತನಾಡಿದವರು.

ಇತ್ತೀಚೆಗೆ ರಾಜ್ಯ ಪ್ರಶಸ್ತಿ ಪಡೆದ ರತ್ನಾ ಬದಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಶಹರ ಹಾಗೂ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಆರ್.ಎಸ್. ಬುರಡಿ, ವಿ.ವಿ. ನಡವಿನಮನಿ, ಕೆ.ಬಿ. ಕೊಣ್ಣೂರ, ರವಿರಾಜ ಪವಾರ, ಬಿ.ಬಿ. ಹಡಪದ, ಎ.ಎಸ್. ಪಾಟೀಲ, ಡಿ.ಎನ್. ಮರಡ್ಡಿ, ಎನ್.ಕೆ. ಪಾಟೀಲ, ಬಿ.ಡಿ. ಯರಗುಪ್ಪಿ, ಎಸ್.ಐ, ಮೇಟಿ, ಮುಂತಾದವರು ಉಪಸ್ಥಿತರಿದ್ದರು. ಕಾರ್ಯಕ್ರಮದ ನಿರೂಪಣೆಯನ್ನು ಪ್ರಾಚಾರ್ಯರಾದ ಅಶೋಕ ಅಂಗಡಿಯವರು ನೆರವೇರಿಸಿದರು. ನಿವೃತ್ತ ಮುಖ್ಯೋಪಾಧ್ಯಾಯಕ ಎನ್.ವಿ. ಜೋಷಿ ವಂದಿಸಿದರು.

## ಸಾಹಿತ್ಯ ಭವನದಲ್ಲಿ ಇಂದು ಸಿಡಿದೆದ್ದ ಶಿವಶಕ್ತಿ ನಾಟಕ ಪ್ರದರ್ಶನ : ಉಚಿತ ಪ್ರದರ್ಶನ




■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಡಾ॥ ಪಂ. ಪುಟ್ಟರಾಜ ಗವಾಯಿಗಳ ಪುಣ್ಯ ಸ್ಮರಣಾರ್ಥ ಜಿಲ್ಲಾ ಹವ್ಯಾಸಿ ರಂಗಭೂಮಿ ಕಲಾವಿದರಿಂದ ಸಿಡಿದೆದ್ದ ಶಿವಶಕ್ತಿ ಅರ್ಥಾತ್ ರೈತನ ಬಾಳು ಕಣ್ಣೀರಿನ ಗೋಳು ಎಂಬ ಸಾಮಾಜಿಕ ನಾಟಕ ಪ್ರದರ್ಶಿಸನಗೊಳ್ಳಲಿದೆ.

ನಗರದ ಸಾಹಿತ್ಯ ಭವನದಲ್ಲಿ ಶುಕ್ರವಾರ ಸಂಜೆ 6:30 ಗಂಟೆಗೆ ಉಚಿತ ಪ್ರದರ್ಶನಗೊಳ್ಳಲಿರುವ ಸುಂದರ ಸಾಮಾಜಿಕ ನಾಟಕವನ್ನು ಕಲಾತ್ಪೋತ್ಸಾಹಕರು ಕುಟುಂಬ ಸಮೇತರಾಗಿ ಬಂದು ನಾಟಕ ವೀಕ್ಷಿಸಿ ಕಲಾವಿದರನ್ನ ಹರಸಿ ಹಾರೈಸಬೇಕು ಎಂದು ಆಯೋಜಕ ಅಲ್ಲಾಭಕ್ಷಿ ವಾಲಿಕಾರ್ ಪ್ರಕಟಣೆಯಲ್ಲಿ ಕೋರಿದ್ದಾರೆ.



ಗದಗ ಲೋಕೋಪಯೋಗಿ ಇಲಾಖೆ ಹಾಗೂ ಸಿವ್ಹಿಲ್ ಗುತ್ತಿಗೆದಾರರ ಸಂಘದ ಶ್ರೀ ಗಜಾನನ ಸಮಿತಿ ವತಿಯಿಂದ ಐ.ಬಿ. ಸಿಬ್ಬಂದಿಯವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಸಂಘದ ವ್ಹಿ.ಎನ್. ಪಾಟೀಲ, ಎಮ್.ಎಸ್. ಪಾಟೀಲ, ಕೆ.ವ್ಹಿ. ಪಾಟೀಲ, ಎಸ್.ಕೆ. ಪಾಟೀಲ, ಕನಕಪ್ಪ ಹಾದಿಮನಿ, ಎಮ್.ಬಿ. ಅಂಗಡಿ, ಎಸ್.ಪಿ. ಮುತ್ತಿನಪೆಂಡಿಮಠ, ರಮೇಶ ರಂಗಪ್ಪನವರ, ಆಂಜನೇಯ ಕಟಗಿ, ಎಮ್.ಎಮ್. ದಾಯಮ್ಮನವರ, ಸಿ.ಜಿ. ಬರಾದಾರ, ತೋಟಪ್ಪ ಗಾಗೇರ, ಆರ್.ವೈ. ಹೊನ್ನಿನಾಯ್ಕರ, ನಾಗರಾಜ ಮಾಗಡಿ, ಮಂಜುನಾಥ ಸೂರಪ್ಪ ಗೌಡ್ರ, ರಯಾಜ ದಾಯಮ್ಮನವರ, ಸಾರ್ಥಕ ಕೊಟ್ನಿಕಲ್ ಹಬೀಬ, ಸಿಬ್ಬಂದಿ ವರ್ಗದವರು ಹಾಗೂ ಗುತ್ತಿಗೆದಾರರ ಸಂಘದ ಸದಸ್ಯರು ಉಪಸ್ಥಿತರಿದ್ದರು.

ಪ್ರತಿಭಾ ಕಾರಂಜಿ, ಕಲೋತ್ಸವ ಕಾರ್ಯಕ್ರಮ ಉದ್ಘಾಟಿಸಿದ ಡಿ.ಎಚ್. ಪಾಟೀಲ ಅಭಿಪ್ರಾಯ

## ಪ್ರತಿಭಾ ಕಾರಂಜಿಯಿಂದ ಪ್ರತಿಭೆಯ ಅನಾವರಣ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಕ್ಕಳಲ್ಲಿ ಹುದುಗಿರುವ ಪ್ರತಿಭೆ ಅರಳಲು ಪ್ರತಿಭಾ ಕಾರಂಜಿ ಸೂಕ್ತ ವೇದಿಕೆಯಾಗಿದ್ದು, ಮಕ್ಕಳು ಕೂಡ ಉತ್ಸಾಹದಿಂದ ಪಾಲ್ಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷರಾದ ಡಿ.ಎಚ್. ಪಾಟೀಲ ಹೇಳಿದರು.



ಅವರು ಪಟ್ಟಣದ ಬಿಸಿಎನ್ ಕನ್ನಡ ಮಾಧ್ಯಮ ಶಾಲೆಯಲ್ಲಿ ನಡೆದ ಲಕ್ಷ್ಮೇಶ್ವರ ಉತ್ತರ ಮತ್ತು ಮಾಗಡಿ ಕ್ಲಸ್ಟರ್ ಮಟ್ಟದ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪ್ರತಿಭಾ ಕಾರಂಜಿ ಒಂದು ವಿನೂತನ ಕಾರ್ಯಕ್ರಮವಾಗಿದ್ದು, ಕ್ಲಸ್ಟರ್, ಬ್ಲಾಕ್, ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ಸಾಂಸ್ಕೃತಿಕ ಮತ್ತು ಸಾಹಿತ್ಯಿಕ ಸ್ಪರ್ಧೆಗಳನ್ನು ನಡೆಸಲಾಗುತ್ತದೆ ಎಂದರು.

ಶಿರಹಟ್ಟಿ ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಈಶ್ವರ ಮೆಡ್ಲೇರಿ ಪ್ರಾಸ್ತಾವಿಕವಾಗಿ ಮಾತನಾಡಿ, ಪ್ರತಿಭಾ ಕಾರಂಜಿ ವಿದ್ಯಾರ್ಥಿಗಳಿಗೆ ವಿವಿಧ ಸ್ಪರ್ಧೆಗಳಿಗೆ ಸಾಮಾನ್ಯ ವೇದಿಕೆಯನ್ನು ಒದಗಿಸುತ್ತದೆ. ಇದರಲ್ಲಿ ಯಶಸ್ವಿ ಮಕ್ಕಳಿಗೆ ಪ್ರಶಂಸಾ ಪತ್ರಗಳು ಮತ್ತು ಬಹುಮಾನಗಳನ್ನು ನೀಡಲಾಗುತ್ತದೆ. ಆಯ್ಕೆಯಾದ ವಿದ್ಯಾರ್ಥಿಗಳನ್ನು ಉನ್ನತ ಮಟ್ಟದ ಸ್ಪರ್ಧೆಗಳಿಗೆ ಕಳುಹಿಸಲಾಗುತ್ತದೆ ಎಂದು ಹೇಳಿದರು.

ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಬಿ.ಎಮ್. ಯರಗುಪ್ಪಿ, ಪ್ರೌಢಶಾಲಾ ಶಿಕ್ಷಕರ ಸಂಘದ ಉಪಾಧ್ಯಕ್ಷ ಎಚ್. ಎಮ್. ಗುತ್ತಲ ಮಾತನಾಡಿ, ಸರ್ಕಾರ ಶಾಲಾ ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಪ್ರತಿಭಾ ಕಾರಂಜಿ, ಮಕ್ಕಳ ಮೇಳ, ಕ್ರಿಡಾ ಕಾರ್ಯಕ್ರಮಗಳನ್ನು ಆಯೋಜಿಸಿದೆ. ಮಕ್ಕಳು ತಮ್ಮಲ್ಲಿರುವ ಕಲೆಯನ್ನು ಪ್ರದರ್ಶಿಸಬೇಕು ಎಂದರು.

ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಸ್ಪರ್ಧೆಯಲ್ಲಿ 13 ಪ್ರಾಥಮಿಕ ಶಾಲೆಗಳು ಮತ್ತು 11 ಪ್ರೌಢಶಾಲೆಗಳ ಮಕ್ಕಳು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ಕಾರ್ಯಕ್ರಮದಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನ ವಿತರಣೆ ಮಾಡಲಾಯಿತು.

ಬಿಸಿಎನ್ ಸ್ವೆಕ್ರಂ ಆಡಳಿತಾಧಿಕಾರಿ ನಾಗರಾಜ ಯಂಡಿಗೇರಿ ಅಧ್ಯಕ್ಷತೆ ವಹಿಸಿದ್ದರು. ಎಫ್.ಎಸ್. ತಳವಾರ, ಗೀತಾ ಹಳ್ಯಾಳ, ವಿ.ಎಚ್. ದೀಪಾಳಿ, ಮುಖ್ಯ ಶಿಕ್ಷಕರಾದ ವಿರೇಶ ಕಮ್ಮಾರ, ಎಸ್.ಡಿ. ಲವಾಣಿ, ಎಚ್.ಎಮ್. ಗುತ್ತಲ, ಕ್ಲಸ್ಟರ್ ಸಿಆರ್‌ಪಿಗಳಾದ ಉಮೇಶ ನೇಕಾರ, ಕೆ.ಪಿ. ಕಂಬಳಿ, ಎನ್. ಎನ್. ಸಾವಿರಕುರಿ, ಎನ್.ಎ. ಮುಲ್ಲಾ, ಸತೀಶ ಬೋಮಲೆ, ಸಿ.ವಿ. ವಡಕಣ್ಣವರ, ಗಿರೀಶ್ ನೇಕಾರ, ಜ್ಯೋತಿ ಗಾಯಕವಾಡ, ಲೋಕೇಶ ಮಠದ, ಎನ್.ಎನ್. ಶಿಗ್ಲಿ, ಎಚ್.ಡಿ. ನಿಂಗರೆಡ್ಡಿ, ಡಿ.ಸಿ. ಪತ್ತಾರ, ಎನ್.ಎಸ್. ಬಂಕಾಪೂರ ಹಾಗೂ ಕ್ಲಸ್ಟರಿನ ವಿವಿಧ ಶಾಲೆಗಳ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಕುಸ್ಮಾ ವತಿಯಿಂದ ಶಿಕ್ಷಕರ ದಿನಾಚರಣೆ : ಶಾಹೀದ್ ಹುಸೇನ್ ತಹಸೀಲ್ದಾರ್

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ತಾಲೂಕಾ ಅನುದಾನ ರಹಿತ ಶಾಲಾ ಆಡಳಿತ ಮಂಡಳಿಗಳ ಒಕ್ಕೂಟ ವತಿಯಿಂದ ಇದೇ ಸೆ.17 ರಂದು ಮಂಗಳವಾರ ಬೆ.10–30 ಗಂಟೆಗೆ ಭಾಗ್ಯನಗರ ರಸ್ತೆಯ ಪಾನಗಂಟಿ ಕಲ್ಯಾಣ ಮಂಟಪದಲ್ಲಿ ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಜನ್ಮದಿನಾಚರಣೆ ಅಂಗವಾಗಿ ಶಿಕ್ಷಕರ ದಿನಾಚರಣೆಯನ್ನು ಆಚರಿಸಲಾಗುವುದು ಎಂದು ಕೊಪ್ಪಳ ತಾಲೂಕ ಕುಸ್ಮಾ ಅಧ್ಯಕ್ಷ ಶಾಹೀದ್ ಹುಸೇನ್ ತಹಸೀಲ್ದಾರ್ ಹೇಳಿದರು.



ನಾನೇ ಅಧ್ಯಕ್ಷ : ಕೊಪ್ಪಳ ತಾಲೂಕು ಅನುದಾನ ರಹಿತ ಆಡಳಿತ ಮಂಡಳಿ ಒಕ್ಕೂಟದ ಅಧಿಕೃತ ಅಧ್ಯಕ್ಷ ನಾನೇ ಇದ್ದು,ಬೇರೆಯವರ ಆರೋಪಗಳು ಏನೇ ಇರಲಿ ನಮ್ಮ ಸಂಘ ಅಧಿಕೃತವಾಗಿ ನೋಂದಣಿಯಾಗಿದ್ದು ಇದೆ ಅಧಿಕೃತ ಸಂಘ ಎಂದು ಅವರು ಸ್ಪಷ್ಟಪಡಿಸಿದ ಅವರು ಕೊಪ್ಪಳ ತಾಲೂಕು ಖಾಸಗಿ ಶಾಲೆಗಳಿಂದ ಚಂದ,ವಂದತಿ ಪಡೆದಿದ್ದು ಶಿಕ್ಷಕರ ದಿನಾಚರಣೆಯನ್ನು ಅದ್ದೂರಿಯಾಗಿ ಆಚರಿಸಲಾಗುವುದು ಎಂದರು.

ನಗರದ ಕೆಯೂಡಬ್ಲ್ಯೂಜೆ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿ ದಿವ್ಯ ಸಾನಿಧ್ಯವನ್ನು ಶಿರಹಟ್ಟಿಯ ಶ್ರೀ ಜಗದ್ಗುರು ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳು ವಹಿಸುವರು. ಕಾರ್ಯಕ್ರಮದ ಉದ್ಘಾಟನೆ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ್ ತಂಗಡಗಿ ನೆರವೇರಿಸುವರು, ಅಧ್ಯಕ್ಷತೆಯನ್ನು ಕುಸ್ಮಾ ಜಿಲ್ಲಾ ಗೌರವಾಧ್ಯಕ್ಷ ರಾಘವೇಂದ್ರ ಪಾನಗಂಟಿ ವಹಿಸುವರು. ಕೊಪ್ಪಳ ತಾಲೂಕ ಕುಸುಮ ಅಧ್ಯಕ್ಷ ಶಾಹೀದ್ ಹುಸೇನ್ ತಹಸೀಲ್ದಾರ್ ಉತ್ತಮ ಶಿಕ್ಷಕ ಪ್ರಶಸ್ತಿ ಹಾಗೂ ಸಾಧಕರಿಗೆ ಸನ್ಮಾನಿಸುವರು.

ದಾವಣಗೆರೆಯ ಇನ್ ಸೈಟ್ಸ್ ಐಎಎಸ್ ಸಂಸ್ಥಾಪಕ ವಿನಯಕುಮಾರ್ ಜಿ.ಬಿ ಉಪನ್ಯಾಸ ನೀಡುವರು, ವಿಶೇಷ ಆಹ್ವಾನಿತರಾಗಿ ಸಂಸದ ಕೆ.ರಾಜಶೇಖರ್ ಹಿಟ್ನಾಳ, ಮಾಜಿ ಸಂಸದ ಸಂಗಣ್ಣ ಕರಡಿ, ಎಂಎಲ್ಸಿ ಹೇಮಲತಾ ನಾಯಕ್ ಪಾಲ್ಗೊಳ್ಳುವರು,ಮುಖ್ಯ ಅತಿಥಿಗಳಾಗಿ ನಗರಸಭೆ ಅಧ್ಯಕ್ಷ ಅಮ್ಜದ್ ಪಟೇಲ್ ,ಜೆಡಿಎಸ್ ಪಕ್ಷದ ಕೋರ್ ಕಮಿಟಿ ಸದಸ್ಯ ಸಿ.ವಿ. ಚಂದ್ರಶೇಖರ್ ,ಬಿಜೆಪಿ ಪಕ್ಷದ ರಾಜ್ಯ ಕಾರ್ಯಕಾರಿ ಸದಸ್ಯ ಡಾ.ಬಸವರಾಜ ಕ್ಯಾವ ಟರ್,ಉದ್ಯಮಿ ಶ್ರೀನಿವಾಸ ಗುಪ್ತ ಸೇರಿದಂತೆ ಮತ್ತಿತರರು ಭಾಗವಹಿಸುವರು.

ಸುದ್ದಿಗೋಷ್ಠಿಯಲ್ಲಿ ಕುಸ್ಮಾ ಸಂಘಟನೆಯ ಮಹಮ್ಮದ್ ಅಲಿ ಮುದ್ದೀನ್ ,ಸುಮನ್ ಎಸ್ ,ಸುರೇಶ್ ಕುಂಬಾರ್ ,ಚಿದಾನಂದ್ ಬನ್ನಿಮಠ ಉಪಸ್ಥಿತರಿದ್ದರು.

## ಸಹಕಾರ ಸಂಸ್ಥೆಗೆ ರೈತರೆ ಉಸಿರು : ಅಮರೇಶ ಉಪಲಾಪುರ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಸಹಕಾರ ಸಂಸ್ಥೆಗೆ ರೈತರೆ ಉಸಿರಾಗಿದ್ದು 63 ವರ್ಷಗಳಿಂದ ರೈತರಿಗೆ ಸ್ಪಂದಿಸುತ್ತಾ ರಾಜ್ಯದಲ್ಲಿಯೇ ಮಾದರಿ ಸಹಕಾರ ಸಂಘ ನಮ್ಮದಾಗಿದ್ದು ಇದು ಎಲ್ಲಾ ಸದಸ್ಯರಿಗೂ ಹೆಮ್ಮೆಯ ಸಂಗತಿಯಾಗಿದೆ ಎಂದು ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತ ಹಾಗೂ ಇಫ್ಕೋ ಆರ್‌ಜಿಬಿ ಸದಸ್ಯ ಅಮರೇಶ ಉಪಲಾಪುರ ಹೇಳಿದರು.

ಅವರು ಕೊಪ್ಪಳ ತಾಲೂಕಿನ ಕಿನ್ನಾಳ ಗ್ರಾಮದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತ, ಕಿನ್ನಾಳದ 63ನೇ ವಾರ್ಷಿಕ ಮಹಾಸಭೆಯನ್ನು ಉದ್ದೇಶಿಸಿ ಮಾತನಾಡುತಿದ್ದರು.

ಕಿನ್ನಾಳ ಗ್ರಾಮ ಇಲ್ಲಿಯ ಗೊಂಬೆ ಕಲೆ ಹಾಗೂ ಕೃಷಿ ಸಹಕಾರ ಸಂಘದಿಂದ ಹೆಸರುವಾಸಿಯಾಗಿದ್ದು ನಮ್ಮ ಸಂಘದಿಂದ ಕೃಷಿ ಸಾಲ 7ಕೋಟಿ 80 ಲಕ್ಷ, ಕೃಷಿಯೇತರ ಸಾಲ 35 ಕೋಟಿ 58 ಲಕ್ಷ, 78 ಲಕ್ಷ ಠೇವಣಿ ಹೊಂದಿದ್ದು ರೈತರ ಉಸಿರಾಗಿ ಸೇವೆ ಸಲ್ಲಿಸುತ್ತಿದೆ.

ಸಂಘದಲ್ಲಿ 3800 ಸದಸ್ಯರಿದ್ದೂ ಅವರ ಸಹಕಾರ ತ್ಯಾಗದಿಂದ 4 ರಾಜ್ಯ ಮಟ್ಟದ ಪ್ರಶಸ್ತಿ ಸೇರಿದಂತೆ ಒಟ್ಟು 24 ಪ್ರಶಸ್ತಿಗಳು ನಮ್ಮ ಸಹಕಾರಿಗೆ ಲಬಿಸಿದ್ದು ಇದು ಎಲ್ಲಾ ಸದಸ್ಯರಿಗೆ ಸಲ್ಲಬೇಕಾದ ಗೌರವಾಗಿದೆ ಎಂದು ಹೇಳಿದರು.

ರೈತರು ಹಾಗೂ ಸದಸ್ಯರು ಸಾಲವನ್ನು ಪಡೆದು ಸಕಾಲಕ್ಕೆ ಮರುಪಾವತಿ ಮಾಡಿ ಸಂಘದ ಅಭಿವೃದ್ದಿಗೆ ಶ್ರಮಿಸುವಂತೆ ವಿನಂತಿಸಿಕೊಂಡರು.

ಸಭೆಯಲ್ಲಿ ಮು.ಕಾ.ನಿ ಚಂದ್ರಶೇಖರ ಕುದರಿಮೋತಿ ಮಾತನಾಡಿ, ಸಂಘದ ಆಡಳಿತವನ್ನು ಸುಗಮವಾಗಿ ಹಾಗೂ ಪ್ರಗತಿದಾಯಕವಾಗಿ ನಡೆಸಿಕೊಂಡು ಹೋಗಲು ಕಾರಣಿಭೂತರಾದ ಸಂಘದ ಎಲ್ಲಾ ಸದಸ್ಯರುಗಳಿಗೆ ಅಭಿವೃದ್ದಿಯ ಕೀರ್ತಿ ಸಲ್ಲುತ್ತದೆ ಎಂದರು.

ರವೀಂದ್ರನಾಥ ಕೋಲ್ಕಾರ ಸಭೆಯ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯ ಮೇಲೆ ಉಪಧ್ಯಕ್ಷರಾದ ಮಲ್ಲಮ್ಮ ಕಾರಬ್ಯಾಳಿ, ನೀರ್ದೆಶಕರಾದ ವಿರಭದ್ರಪ್ಪ ಗಂಜಿ, ಮಹಾದೇವಯ್ಯ ಹಿರೇಮಠ, ಕೆ.ಮಲ್ಲಿಕಾರ್ಜುನ, ಬಸವರಾಜ ಚಿಲವಾಡಗಿ, ವಿರುಪಾಕ್ಷಪ್ಪ ಐತಾಪೂರ, ನಿಂಗಪ್ಪ ಕುಣಿ, ಮೊನೇಶ ಕಳ್ಳಿಮನಿ, ಈರಣ್ಣ ವಾಲ್ಮೀಕಿ, ಮಾಲ ಹಡಗಲಿ, ಬ್ಯಾಂಕ್ ಪ್ರತಿನಿಧಿ ಶಿವುಕುಮಾರ ಮೇಳಿ, ಗ್ರಾ. ಪಂ. ಅಧ್ಯಕ್ಷ ಕರಿಯಮ್ಮ ಉಪ್ಪಾರ, ಇಫ್ಕೋ ವ್ಯವಸ್ಥಾಪಕ ರಾಘವೇಂದ್ರ ಇತರರು ಇದ್ದರು.

‘ತಂಬಾಕು ಮುಕ್ತ ಸಮಾಜ’ ಜಾಗೃತಿ ಕಾರ್ಯಕ್ರಮದಲ್ಲಿ ಡಾ. ಅರವಿಂದ ಅಭಿಮತ

# ತಂಬಾಕು ನಮ್ಮ ಆಯುಷ್ಯ ಕುಗ್ಗಿಸುತ್ತದೆ

■ವಿಜಯಸಾಕ್ಷಿ ಸುದ್ದಿ, ಗದಗ

ಜೀವನವೆಂಬುದು ದೇವರು ನೀಡಿದ ಅದ್ಬುತ ಕೊಡುಗೆ. ಈ ಜೀವನ ಸುಖ–ದುಃಖಗಳ ಸಾಗರ. ಏನೇ ಬರಲಿ ಎಲ್ಲವನ್ನೂ ಸಹನೆ, ಶ್ರದ್ಧೆ, ಭಕ್ತಿ–ಭಾವದಿಂದ ಬದುಕಿ ಬಾಳುವದು ಮುಖ್ಯವಾದ ಸಂಗತಿಯಾಗಿದೆ ಎಂದು ಸಮುದಾಯ ಜಿಮ್ಸ್‌ನ ಡಾ. ಅರವಿಂದ ಕರಿನಾಗಣ್ಣವರ ಅಭಿಪ್ರಾಯಪಟ್ಟರು.

ಜಿಲ್ಲಾ ಕಾರಾಗೃಹ, ಗದಗ ನಿರ್ಮಲ ವಿವಿಧೋದ್ದೇಶಗಳ ಸೇವಾ ಸಂಸ್ಥೆ ಮುಂಡರಗಿ ಇವುಗಳ ಸಹಯೋಗದಲ್ಲಿ ‘ತಂಬಾಕು ಮುಕ್ತ ಸಮಾಜ’ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ತಂಬಾಕಿನಂತಹ ವಿಷಯುಕ್ತ ವಸ್ತು, ಧೂಮಪಾನ ನಮ್ಮ ಆಯುಷ್ಯವನ್ನು ತಿನ್ನುತ್ತದೆ. ಒಂದೇ ಒಂದು ಸಿಗರೇಟನ್ನು ಸೇದುವದರಿಂದ 11 ನಿಮಿಷ ಆಯುಷ್ಯ ಕಡಿಮೆಯಾಗುತ್ತದೆ. ರಕ್ತನಾಳಗಳನ್ನು ನಿಲ್ಲಿಸಿ ಅನೇಕ ಕಾಯಿಲೆಗಳಿಗೆ ಆಹ್ವಾನ ನೀಡುತ್ತದೆ. ನಾವು ಸೇದಿ ಬಿಡುವ ಹೊಗೆಯಲ್ಲಿ ಸಾವಿರಾರು ಕ್ರಿಮಿಗಳು ಇರುತ್ತವೆ.



ಅವುಗಳಿಂದ ನಮ್ಮ ಜೊತೆಗಿದ್ದವರಿಗೂ ಅದರ ಪರಿಣಾಮ ಬೀರುತ್ತದೆ.

ಹೀಗಾಗಿ ಚಟ ಮಾಡುವವರು ತಮ್ಮ ಮಾನಸಿಕ, ದೈಹಿಕ ಸಾಮರ್ಥ್ಯವನ್ನು ಕಳೆದುಕೊಳ್ಳುತ್ತಾರೆ. ನಮ್ಮ ಯುವಕರು ಸಣ್ಣ ವಯಸ್ಸಿನಲ್ಲಿ ನಿಶ್ಯಕ್ತಿಗೆ ಬಲಿಯಾಗುತ್ತಾರೆ. ಬದುಕುವ ಭರವಸೆಯನ್ನು ಕಳೆದುಕೊಳ್ಳುತ್ತಾರೆ. ಯಾವುದೇ ಪರಿಸ್ಥಿತಿಯಲ್ಲಿಯೂ ತಮ್ಮ ತಾಳ್ಮೆಯನ್ನು ಕಳೆದುಕೊಳ್ಳಬಾರದು ಎಂದು ಕಾರಾಗೃಹದ ಕೈದಿಗಳಿಗೆ ಕಿವಿಮಾತು ಹೇಳಿದರು.

ಕಾರಾಗೃಹದ ಅಧೀಕ್ಷಕರಾದ ಈರಣ್ಣ ರಂಗಾಪೂರ ಮಾತನಾಡಿದರು. ಕಾರ್ಯಕ್ರಮದ ಉಪಸ್ಥಿತಿ ವಹಿಸಿದ್ದ ನಿರ್ಮಲ ಸೇವಾ ಸಂಸ್ಥೆ ಅಧ್ಯಕ್ಷರಾದ ನಿರ್ಮಲಾ ತರವಾಡೆ ಪ್ರಾಸ್ತಾವಿಕ ಮಾತುಗಳನ್ನಾಡಿದರು. ಅಂದಾನೆಪ್ಪ ವಿಭೂತಿ, ಜೈಲರ್ ಸುನಂದಾ

ಸಾಹಿತಿಗಳಾದ ಆಯ್ಕೆ ಕಮ್ಮಾರ ಮಾತನಾಡಿ, ಆರೋಗ್ಯವೊಂದನ್ನು ಕಳೆದುಕೊಂಡರೆ ಎಲ್ಲವನ್ನೂ ಕಳೆದುಕೊಂಡಂತೆ. ಮಾನವರಾಗಿ ಬದುಕುವ ನಾವು, ಕೈ ಮೀರಿ ಆಗುವಂತಹ ತಪ್ಪುಗಳನ್ನು ತಿದ್ದಿಕೊಂಡು ಆದರ್ಶಮಯ ಬದುಕನ್ನುಕಟ್ಟಿಕೊಳ್ಳಬೇಕು ಎಂದು ಸಲಹೆ ನೀಡಿದರು. ಇದೇ ಸಂದರ್ಭದಲ್ಲಿ ಜನಪದ ಕಲಾವಿದರಾದ ಗವಿಸಿದ್ದಯ್ಯ ಹಳ್ಳಿಕೇರಿಮಠ ಜನಪದ ರಂಜನೆಯ ಮೂಲಕ ಜೀವನದ ಮೌಲ್ಯವನ್ನು ತಿಳಿಸಿದರು.

ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಮಂಜುಳಾ ವೆಂಕಟೇಶಚ್ಚು, ಸುನಿಲ ಕುಮಾರ ಟಿಕಲ್, ಮಹಾಂತೇಶ ಬೆರಗಣ್ಣವರ, ಚಂದ್ರಕಲಾ ಇಟಗಿಮಠ, ಶಿ ಕಸ್ತೂರಿ ಕಡಗದ ಕವಿತೆ ವಾಚಿಸಿದರು. ಕಾರಾಗೃಹದ ಸಿಬ್ಬಂದಿ ಸೋಮಶೇಖರ ಕಾಳೆ ಪ್ರಾರ್ಥಿಸಿದರು. ಪ್ರೊ. ಬಸವರಾಜ ನೆಲಜೇರಿ ನಿರೂಪಿಸಿ ವಂದಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka